# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 302 ಶೀರ್ಷಿಕೆ ಕೋಡ್: ಕೆಎಆರ್ ಕೆಎನ್ 28269 ಚಿತ್ರದುರ್ಗ ದಿನಾಂಕ: 24–06–2024 ಸೋಮವಾರ ಪುಟ: 4 ಬೆಲೆ : ರೂ.2–00
Volume - 01 Issue - 302 Title- Code: KARKAN 28269 Chitradurga Date: 24-06-2024 Monday Page: 4 Price: Rs. 2-00



ಒಳಪುಟದ ಸುದ್ದಿಗಳು
ವಾಲ್ಮೀಕಿ ನಿಗಮ ಹರಣ: 28ರಂದು ಬಿಜೆಪಿಯಿಂದ ಡಿಸಿ ಕಚೇರಿ ಮುತ್ತಿಗೆ 2
ಯೋಗಾದಿಂದ ರೋಗಮುಕ್ತ ಜೀವನ: ತಾಜ್‌ಪೀರ್ 3
ಶುದ್ಧ ಆಹಾರ ಸೇವನೆ ರೂಢಿಸಿಕೊಳ್ಳಿ: ಡಾ.ಶಾಂತಲಿಂಗ ಶಿವಾಚಾರ್ಯ ಸ್ವಾಮೀಜಿ 4



ಸುದ್ದಿ, ಜಾಹಿರಾತಿಗೆ 9686622252


**ಶುಭ ನುಡಿ**

ಬಟ್ಟೆ ನೋಡಿ ಗೆಳೆತನ ಮಾಡಬೇಡ, ಗುಣ ನೋಡಿ ಗೆಳೆತನ ಮಾಡು , ಯಾಕೆಂದರೆ ಬಟ್ಟೆ ಹರಿದು ಹೋಗುವ ತನಕ ಮಾತ್ರ ಇರುತ್ತದೆ, ಗುಣ ಸಾಯುವವರೆಗೂ ಇರುತ್ತದೆ !!

» ಶುಭೋದಯ

# ಪುಷ್ಪಕ್ ರಾಕೆಟ್ ಹ್ಯಾಟ್ರಿಕ್ ಉಡಾವಣೆ ಯಶಸ್ವಿ–ಇಸ್ರೋದಿಂದ ಮಹತ್ವದ ಮೈಲಿಗಲ್ಲು

» ನಮ್ಮಜನ.ಸಮಾಚಾರ, ಚಿತ್ರದುರ್ಗ

ಜಿಲ್ಲೆಯ ಚಳ್ಳಕೆರೆ ತಾಲೂಕಿನ ನಾಯಕನಹಟ್ಟಿಯ ಡಿಆರ್‌ಡಿಓ ಸಂಸ್ಥೆಯಲ್ಲಿ ಏರೋನೆಟಿಕಲ್ ಟೆಸ್ಟ್ ರೇಂಜ್‌ನಿಂದ ಪುಷ್ಪಕ್ ರಾಕೆಟ್ ಉಡಾವಣೆ ಸಹ ಯಶಸ್ವಿಯಾಗಿದೆ.

ರನ್ ವೇನಲ್ಲಿ ಇಂದು ಬೆಳಗ್ಗೆ 7.40ಕ್ಕೆ ರಾಕೆಟ್ ಉಡಾವಣೆ ಮಾಡಲಾಯಿತು ಎಂದು ಇಸ್ರೋ ಮಾಹಿತಿ ನೀಡಿದೆ. ಸುಮಾರು 4.5 ಕಿಲೋ ಮೀಟರ್ ಎತ್ತರದಲ್ಲಿ ಹಾರಾಟ ನಡೆಸಿದ ರಾಕೆಟ್ ಸುರಕ್ಷಿತವಾಗಿ ಲ್ಯಾಂಡ್ ಆಗಿದೆ. ಇದರೊಂದಿಗೆ ಮರುಬಳಕೆ ಮಾಡಬಹುದಾದ ರಾಕೆಟ್ ತಂತ್ರಜ್ಞಾನದಲ್ಲಿ ಇಸ್ರೋ ಮಹತ್ವದ ಮೈಲಿಗಲ್ಲು ಸಾಧಿಸಿದೆ.

ಅತಿ ಕಡಿಮೆ ವೆಚ್ಚದಲ್ಲಿ ಮರು ಉಪಯೋಗವಾಗುವ ರಾಕೆಟ್‌ಗಳ ಉಡಾವಣೆಯಿಂದ ಹೆಚ್ಚಿನ ಹಣ ಉಳಿತಾಯ ಆಗಲಿದೆ ಎಂಬುದು ಇಸ್ರೋ ಉದ್ದೇಶವಾಗಿದೆ. ಭಾರತೀಯ ವಾಯುಪಡೆಯ ಚಿನೂಕ್ ಹೆಲಿಕಾಪ್ಟರ್ ಸಹಾಯದಿಂದ ಖಐಗಿ ಐಇಫಿ–03 ಉಡಾವಣಾ ವಾಹನವನ್ನು ಮೇಲಕ್ಕೆ ಕೊಂಡೊಯ್ದು, 4.5 ಕಿಲೋ ಮೀಟರ್ ಎತ್ತರದಿಂದ ಲ್ಯಾಂಡಿಗ್‌ಗೆ ಬಿಟ್ಟು ಟೆಸ್ಟಿಂಗ್ ನಡೆಸಲಾಯಿತು.

**ಇಸ್ರೋ ಮುಖ್ಯಸ್ಥರಿಂದ ಅಭಿನಂದನೆ:** ಇಸ್ರೋ ಅಧ್ಯಕ್ಷ ಎಸ್. ಸೋಮನಾಥ್ ಅವರು ಇಸ್ರೋದ ಅಭೂತಪೂರ್ವ ಸಾಧನೆಗೆ ಅಭಿನಂದನೆ ಸಲ್ಲಿಸಿದ್ದಾರೆ. ಇಂತಹ ಸಂಕೀರ್ಣ ಕಾರ್ಯಾಚರಣೆಗಳಲ್ಲಿ ಯಶಸ್ಸಿನ ಸರಣಿಯನ್ನು ಕಾಯ್ದುಕೊಳ್ಳುವಲ್ಲಿ ತಂಡದ ಪ್ರಯತ್ನಕ್ಕೆ ಅಭಿನಂದನೆ ಎಂದು ಹೇಳಿದ್ದಾರೆ.

**ರಾಕೆಟ್ ವೈಶಿಷ್ಟ್ಯವೇನು?:** ಪುಷ್ಪಕ್ ಬಾಹ್ಯಾಕಾಶ ವಾಹನವಾಗಿದ್ದು, ಇದನ್ನು ಗಗನನೌಕೆಯು ಮರುಬಳಕೆ ಮಾಡುವ ರಾಕೆಟ್ ರೀತಿ ಉಡಾವಣೆ ಮಾಡಲಾಗುತ್ತದೆ. ಉಡಾವಣೆ ಬಳಿಕ ಇದು ಮತ್ತೆ ಲ್ಯಾಂಡ್ ಆಗುತ್ತದೆ ಎಂಬುದು ವಿಶೇಷವಾಗಿದೆ. ಇದು ಪುನಾ ಲ್ಯಾಂಡ್ ಆಗಲು ಇಸ್ರೋ ರೋಬೊಟಕ್ ತಂತ್ರಜ್ಞಾನವನ್ನು ಅಳವಡಿಸಿಕೊಂಡಿದೆ. ದೇಶೀಯವಾಗಿಯೇ ಇದನ್ನು ಅಭಿವೃದ್ಧಿಪಡಿಸಲಾಗಿದ್ದು, ರಾಮಾಯಣದಿಂದ ಸ್ಫೂರ್ತಿಗೊಂಡು ಇದಕ್ಕೆ ಪುಷ್ಪಕ್ ಎಂದು ಹೆಸರಿಡಲಾಗಿದೆ. ಬಾಹ್ಯಾಕಾಶ ಅವಶೇಷಗಳ ಪ್ರಮಾಣ ತಪ್ಪಿಸಲು, ಕಕ್ಷೆಯಲ್ಲಿರುವ ಉಪಗ್ರಹಗಳಿಗೆ ಇಂಧನ ಪೂರೈಸಲು ಮರುಬಳಕೆ ರಾಕೆಟ್‌ಗಳು ಮಹತ್ವದ ಪಾತ್ರ ನಿರ್ವಹಿಸಲಿದೆ.

## ಫಾಸ್ಟ್ ನ್ಯೂಸ್

### ಆರು ತಿಂಗಳ ತುಂಬು ಗರ್ಭಿಣಿ ಅಸ್ವಸ್ಥಗೊಂಡು ಬೆಂಗಳೂರಿನಲ್ಲಿ ಸಾವು.

» ಚಳ್ಳಕೆರೆ

ಆರು ತಿಂಗಳ ತುಂಬು ಗರ್ಭಿಣಿಯೊಬ್ಬಳು ದಿಢೀರನೇ ಅನಾರೋಗ್ಯಕ್ಕೆ ತುತ್ತಾಗಿ ಸಾನವಪ್ಪಿದ ಘಟನೆ ಗೋಪನಹಳ್ಳಿ ಗ್ರಾಮದಲ್ಲಿ ನಡೆದಿದೆ. ಗ್ರಾಮದ ಜಿ.ಆರ್. ಹರ್ಷಿತ(30) ಮೃತಪಟ್ಟ ದುರ್ದೈವಿಯಾಗಿದ್ದು, ಆಸ್ಪತ್ರೆಗೆ ಭೇಟಿ ನೀಡಿ ಆರೋಗ್ಯ ತಪಾಸಣೆಗೆ ಒಳಗಾಗಿದ್ದಳು. ಈಕೆಯನ್ನು ಪರೀಕ್ಷಿಸಿದ ವೈದ್ಯರು ಹೊಟ್ಟೆಯಲ್ಲಿ ಅವಳಿ ಮಕ್ಕಳಿರುವುದನ್ನು ದೃಢಪಡಿಸಿದ್ದರು. ವೈದ್ಯರ ಸಲಹೆಯಂತೆ ಆಕೆ ಪ್ರತಿನಿತ್ಯ ಹೆಚ್ಚು ಓಡಾಡದೆ ಎಚ್ಚರಿಕೆ ಇದ್ದ ಇದ್ದರು ಎನ್ನಲಾಗಿದೆ. ಆದರೆ, ದಿಢೀರನೇ ಆರೋಗ್ಯದಲ್ಲಿ ಏರುಪೇರಾದಾಗ ಗಾಂಬರಿಗೊಂಡ ಮನೆಯವರು ಅಂಬ್ಯುಲೆನ್ಸ್ ಮೂಲಕ ಬೆಂಗಳೂರಿನ ಖಾಸಗಿ ಆಸ್ಪತ್ರೆಗೆ ದಾಖಲಿಸಿದ್ದರು. ಆದರೆ, ಆರೋಗ್ಯ ಕೈಕೊಟ್ಟ ಹಿನ್ನೆಲೆಯಲ್ಲಿ ಹೃದಯಾಘಾತದಿಂದ ಮೃತಪಟ್ಟಿರುತ್ತಾಳೆ. ವಿಶೇಷವೆಂದರೆ ಈಕೆಯ ಆರೋಗ್ಯ ತಪಾಸಣೆ ನಡೆದಿ ವೈದ್ಯರು ಅವಳಿ ಮಕ್ಕಳಿರುವುದಾಗಿಯೂ ತಿಳಿಸಿದ್ದರು ಎನ್ನಲಾಗಿದೆ.

### ಅಕ್ರಮ ಮರಳು ಸಾಗಾಟ: ಟ್ರಾ್ಯಕ್ಟರ್ ವಶಪಡಿಸಿಕೊಂಡ ಪೊಲೀಸರು

» ಚಳ್ಳಕೆರೆ

ಅಕ್ರಮ ಮರಳು ಸಾಗಾಟವನ್ನು ಪೊಲೀಸ್ ಇಲಾಖೆ ಎಚ್ಚರಿಕೆಯಿಂದ ಕಾರ್ಯನಿರ್ವಹಿಸುತ್ತಿದ್ದರೂ ಸಹ ಪೊಲೀಸರ ಕಣ್ಣು ತಪ್ಪಿಸಿ ಅಕ್ರಮಮರಳು ಸಾಗಾಟ ನಿರ್ಭೀತಿಯಿಂದ ನಡೆಯುತ್ತಿದ್ದು, ತಾಲ್ಲೂಕಿನ ನನ್ನಿವಾಳ ಗ್ರಾಮ ಪಂಚಾಯಿತಿ ವ್ಯಾಪ್ತಿಯ ದೊರೆಹಟ್ಟಿಯ ಮೇಗಳಕಪ್ಪಿಲೆ ಬಳಿ ಮರಳು ತುಂಬುತ್ತಿದ್ದ ಟ್ರ್ಯಾಕ್ಟರನ್ನು ಪೊಲೀಸರು ವಶಪಡಿಸಿಕೊಂಡಿದ್ದಾರೆ. ಠಾಣಾ ವೃತ್ತ ನಿರೀಕ್ಷಕ ರಾಜಫಕೃದ್ದೀನ್ ದೇಸಾಯಿ ಮಾರ್ಗದರ್ಶನದಲ್ಲಿ ಪಿಎಸ್‌ಐ ಧರೆಪ್ಪಬಾಳಪ್ಪ ದೊಡ್ಡಮನಿ ಪ್ರಕರಣ ದಾಖಲಿಸಿ ತನಿಖೆ ಮುಂದುವರೆಸಿದ್ದಾರೆ.

### ದ್ವಿತೀಯ ಪಿಯುಸಿ 3ನೇ ಪರೀಕ್ಷೆ, ಕೇಂದ್ರಗಳ ಸುತ್ತಮುತ್ತ ನಿಷೇಧಾಜ್ಞೆ

» ದಾವಣಗೆರೆ

ಜೂನ್ 24 ರಿಂದ ಜುಲೈ 5 ರವರೆಗೆ ನಗರದಲ್ಲಿ ನಡೆಯಲಿರುವ ದ್ವಿತೀಯ ಪಿಯುಸಿ 3 ನೇ ಪರೀಕ್ಷೆ ನಡೆಯಲಿದ್ದು ಸುಗಮ ಪರೀಕ್ಷೆಗಾಗಿ ಮತ್ತು ಪರೀಕ್ಷಾ ಅವ್ಯವಹಾರ ತಡೆಗಟ್ಟಲು ಜಿಲ್ಲಾ ವ್ಯಾಪ್ತಿಯ 8 ಪರೀಕ್ಷಾ ಕೇಂದ್ರಗಳ ಸುತ್ತಮುತ್ತ 144 ಸೆಕ್ಷನ್ ಜಾರಿಗೊಳಿಸಿ 200 ಮೀಟರ್ ವ್ಯಾಪ್ತಿಯಲ್ಲಿ ನಿಷೇಧಾಜ್ಞೆ ಜಾರಿಗೊಳಿಸಿ ಜಿಲ್ಲಾ ದಂಡಾಧಿಕಾರಿ ಡಾ.ವೆಂಕಟೇಶ್.ಎಂ.ವಿ ಆದೇಶಿಸಿದ್ದಾರೆ.

### ವಿದ್ಯುತ್ ಮೋಟಾರ್ ರಿವೈಂಡಿಂಗ್ ತರಬೇತಿ

» ದಾವಣಗೆರೆ

ವಿದ್ಯುತ್ ಮೋಟಾರ್ ರಿವೈಂಡಿಂಗ್ ಮತ್ತು ದುರಸ್ತಿ ಸೇವೆಗಳ ತರಬೇತಿಯನ್ನು ಜು.1 ರಿಂದ 30 ದಿನಗಳ ಕಾಲ ಹಮ್ಮಿಕೊಳ್ಳಲಾಗಿದ್ದು ಆಸಕ್ತ ಗ್ರಾಮೀಣ ನಿರುದ್ಯೋಗಿ ಯುವಕರು ಭಾಗವಹಿಸಬಹುದಾಗಿದೆ. ಮಾಹಿತಿಗಾಗಿ ದೂ.ಸಂ 8105526792, 9113880 324, 9241482541 ನ್ನು ಸಂಪರ್ಕಿಸಬಹುದು.

## ಅಂಗನವಾಡಿ ಕಾರ್ಯಕರ್ತರಿಂದ ಇಂದು ಬೆಂಗಳೂರು ಚಲೋ

» ಚಳ್ಳಕೆರೆ

ರಾಜ್ಯ ಸರ್ಕಾರ ಪ್ರಸ್ತುತ ವರ್ಷದಿಂದ ಜಾರಿಗೆ ತಂದಿರುವ ಸರ್ಕಾರಿ ಶಾಲೆಗಳಲ್ಲೇ ಎಲ್‌ಕೆಜಿ ಮತ್ತು ಯುಕೆಜಿ ತರಗತಿಗಳನ್ನು ಆರಂಭಿಸುವುದನ್ನು ವಿರೋಧಿಸಿ ರಾಜ್ಯ ಎಐಟಿಯುಸಿ ಕಾರ್ಮಿಕ ಸಂಘಟನೆಯ ಅಂಗನವಾಡಿ ಕಾರ್ಯಕರ್ತರು, ಸಹಾಯಕಿಯ ಫೆಡರೇಷನ್‌ವತಿಯಿಂದ ಜೂನ್ 24ರಂದು ಬೆಂಗಳೂರಿನ ಸ್ವಾತಂತ್ರ್ಯ ಉದ್ಯಾನವನದಲ್ಲಿ ಅನಿಧಿರ್ಷ್ಟಾವಧಿ ಧರಣಿ ಸತ್ಯಾಗ್ರಹ ನಡೆಸಲಿದ್ದು, ಸತ್ಯಾಗ್ರಹದಲ್ಲಿ ಪಾಲ್ಗೊಳ್ಳಲು ಅವಕಾಶ ನೀಡಬೇಕೆಂದು ಎಐಟಿಯುಸಿ ರಾಜ್ಯ ಸಂಚಾಲಕ ಸಿ.ವೈ.ಶಿವರುದ್ರಪ್ಪ ಆಗ್ರಹಿಸಿದ್ದಾರೆ.

ಪುಟ ↘ 2

## ಶಿಕ್ಷಕನ ಮನೆಗೆ ನುಗ್ಗಿ ಬೆದರಿಸಿ ಬೆಳ್ಳಿ, ಬಂಗಾರ, ಹಣದೊಂದಿಗೆ ಪರಾರಿ ಆದ ದರೋಡೆಕೋರರು

**ಚಳ್ಳಕೆರೆ:** ಚಳ್ಳಕೆರೆ ನಗರದ ಹೊರವಲಯದ ಸಣ್ಣಲಿಂಗಪ್ಪ ಬಡಾವಣೆಯ ಶಿಕ್ಷಕನ ಮನೆಗೆ ದರೋಡೆಕೋರರು ನುಗ್ಗಿ ಗಂಡ, ಹೆಂಡತಿಯನ್ನು ಬೆದರಿಸಿ ಬೆಳ್ಳಿ, ಬಂಗಾರ, ಹಣದೊಂದಿಗೆ ಪರಾರಿಯಾದ ಘಟನೆ ಶನಿವಾರ ರಾತ್ರಿ ನಡೆದಿದೆ. ಶಿಕ್ಷಕ ಈರಣ್ಣನವರ ಮನೆಗೆ ಹಿಂಭಾಗಿಲಿನಿಂದ ನುಗ್ಗಿದ ಮೂವರು ಕಳ್ಳರು ಮನೆಯಲ್ಲಿದ್ದ ಶಿಕ್ಷಕ ಬಿ.ಈರಣ್ಣ(54) ಪತ್ನಿ ರಾಧ(47) ಇವರಿಗೆ ಜೀವಬೆದರಿಕೆ ಒಡ್ಡಿ ಬಲವಂತದಿಂದ ಮನೆಯಲ್ಲಿದ್ದ ಬಂಗಾರ, ಬೆಳ್ಳಿ, ನಗದು ದೂಚಿ ಇಬ್ಬರನ್ನು ಪಂಚೆ, ಟವಲ್‌ನಿಂದ ಕಟ್ಟಿಹಾಕಿ ಕತ್ತಲಲ್ಲಿ ಪರಾರಿಯಾಗಿದ್ದಾರೆ.

ಪುಟ ↘ 2

**ಪ್ರಮುಖ ಸುದ್ದಿ**

### ಸರ್ಕಾರಿ ಇಂಜಿನಿಯರಿಂಗ್ ಕಾಲೇಜಿನ ಮೂರನೇ ವಾರ್ಷಿಕೋತ್ಸವ

# ಕಾಲೇಜು ಅಭಿವೃದ್ಧಿಗೆ 10 ಲಕ್ಷ ರೂ.ಅನುದಾನ: ಶಾಸಕ

» ಚಳ್ಳಕೆರೆ

ಚಳ್ಳಕೆರೆ ವಿಧಾನಸಭಾ ಕ್ಷೇತ್ರವೂ ಸೇರಿದಂತೆ ಜಿಲ್ಲೆಯ ವಿವಿಧ ಭಾಗಗಳ ವಿದ್ಯಾರ್ಥಿಗಳು ಇಂಜಿನಿಯರಿಂಗ್ ವಿದ್ಯಾಭ್ಯಾಸಕ್ಕಾಗಿ ರಾಜ್ಯದ ಬೇರೆ, ಬೇರೆ ಕಾಲೇಜುಗಳತ್ತ ಹೋಗಬೇಕಿತ್ತು. ಆದರೆ, ಬಯಲುಸೀಮೆಯ ಈ ಬರದನಾಡಿನಲ್ಲಿ ಇಂಜಿನಿಯರಿಂಗ್ ಕಾಲೇಜು ಆರಂಭ ಸವಾಲಿನ ಕೆಲಸವಾಗಿತ್ತು. ಆದರೆ, ಕಳೆದ 2013–18ರ ಅವಧಿಯ ಕಾಂಗ್ರೆಸ್ ಸರ್ಕಾರ ಮುಖ್ಯಮಂತ್ರಿ ಸಿದ್ದರಾಮಯ್ಯ ಇಂಜಿನಿಯರಿಂಗ್ ಕಾಲೇಜು ಉದ್ಘಾಟಿಸುವ ಮೂಲಕ ನೂರಾರು ವರ್ಷಗಳ ಈ ಭಾಗದ ಇಂಜಿನಿಯರಿಂಗ್ ಪದವಿಪಡೆಯುವ ವಿದ್ಯಾರ್ಥಿಗಳ ಕನಸು ನನಸು ಮಾಡಿದ್ದಾರೆಂದು ಶಾಸಕ ಟಿ.ರಘುಮೂರ್ತಿ ತಿಳಿಸಿದರು.

ಬಳ್ಳಾರಿ ರಸ್ತೆಯಲ್ಲಿರುವ ಸರ್ಕಾರಿ ಇಂಜಿನಿಯರಿಂಗ್ ಕಾಲೇಜಿನ ಪ್ರಸ್ತುತ ವರ್ಷದ ವಿದ್ಯಾರ್ಥಿಗಳ ವಾರ್ಷಿಕೋತ್ಸವ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಚಳ್ಳಕೆರೆ ಕ್ಷೇತ್ರದಲ್ಲಿ ಈಗಾಗಲೇ ಕಳೆದ ಮೂರು ವರ್ಷಗಳಿಂದ ಕಾಲೇಜು ಕಾರ್ಯನಿರ್ವಹಿಸುತ್ತಿದ್ದು ಮುಂದಿನ ವರ್ಷ 80 ವಿದ್ಯಾರ್ಥಿಗಳು ಇಂಜಿನಿಯರಿಂಗ್ ಪದವಿ ಮುಗಿಸಿ ಮೊದಲ ತಂಡವಾಗಿ ಹೊರಬರುತ್ತಾರೆ. ನಾನು ಈ ಸಮಾರಂಭದಲ್ಲಿ ಭಗವಂತನಲ್ಲಿ ಪ್ರಾರ್ಥಿಸುವುದೆನೆಂದರೆ ಎಲ್ಲಾ ವಿದ್ಯಾರ್ಥಿಗಳನ್ನು ಉತ್ತಮ ಶ್ರೇಣಿಯಲ್ಲಿ ಉತ್ತೀರ್ಣ ಮಾಡುವುದಲ್ಲದೆ, ಅವರ ಉದ್ಯೋಗದ ಕನಸು ನನಸು ಮಾಡಿ ಅವರ ಭವಿಷ್ಯದ ಬದುಕನ್ನು ಉಜ್ವಲಗೊಳಿಸಲಿ ಎಂದು ಪ್ರಾರ್ಥಿಸುವೆ ಎಂದರು.

ಪ್ರಸ್ತುತ ಈ ಕಾಲೇಜಿಗೆ ಈಗಾಗಲೇ ಶಾಸಕ ನಿಧಿಯಿಂದ 5 ಲಕ್ಷ, ನಗರಸಭೆಯಿಂದ 6 ಲಕ್ಷ ಅನುದಾನ ನೀಡಲಾಗಿದೆ. ಪ್ರಸ್ತುತ 2024–25ನೇ ಅವಧಿಗೆ ನನ್ನ ಅನುದಾನದಲ್ಲಿ 10 ಲಕ್ಷ ಹಣ ನೀಡುವ ಭರವಸೆ ನೀಡಿದರು.ಪ್ರಾಸ್ತಾವಿಕವಾಗಿ ಮಾತನಾಡಿ ಡಾ.ಎಂ.ಎಂ.ಬೆನಾಲ್, ಚಳ್ಳಕೆರೆಯಲ್ಲಿ ಸರ್ಕಾರಿ ಇಂಜಿನಿಯರಿಂಗ್ ಕಾಲೇಜು ಕಾರ್ಯನಿರ್ವಹಿಸುವ ಪ್ರಮುಖ ಕಾರಣ ಶಾಸಕ ಟಿ.ರಘುಮೂರ್ತಿ. ಶಾಸಕರು ನೀಡಿದ ಎಲ್ಲಾ ಅನುದಾನವನ್ನು ಕಾಲೇಜಿನ ಗ್ರಂಥಾಲಯಕ್ಕೆ ಉಪಯೋಗಿಸಿಕೊಳ್ಳಲಾಗಿದೆ. ಪ್ರಸ್ತುತ ನೀಡಲಿರುವ 10 ಲಕ್ಷ ಹಣವನ್ನು ಗಣಕಯಂತ್ರ ಖರೀದಿ ಮಾಡಲು ಸಿದ್ಧತೆ ನಡೆದಿದೆ. ಬೇರೆ, ಬೇರೆ ವಿಭಾಗಗಳಲ್ಲಿ ಇನ್ನೂ ಹೆಚ್ಚಿನ ಅಭಿವೃದ್ಧಿ ಅವಶ್ಯಕತೆ ಇದೆ, ಈ ಬಗ್ಗೆ ಶಾಸಕರಲ್ಲಿ ಮನವಿ ಮಾಡಲಾಗಿದೆ. ಇದೇ ಸಂದರ್ಭದಲ್ಲಿ ಪ್ರಸ್ತುತ ಕಾಲೇಜಿನಲ್ಲಿ ಕೇವಲ ಮೂವರು ಸಿಬ್ಬಂದಿ ಮಾತ್ರ ಖಾಯಂನೌಕರರಾಗಿದ್ದು ಉಳಿದ ಎಲ್ಲರೂ ಅತಿಥಿ ಉಪನ್ಯಾಸಕರೇ ಇದ್ದಾರೆ ಎಂದರು.

ಕಾರ್ಯಕ್ರಮದಲ್ಲಿ ಡಾ.ಲಕ್ಷ್ಮಿದೇವಮ್ಮ, ಪೂಜಾ, ಮಲ್ಲಿಕಾರ್ಜುನ, ಸಹನ, ಸ್ವಾತಿ, ಶಿವರಾಜುಕುಮಾರ್, ರಮೇಶ್, ನಾಗಾರ್ಜುನ, ರಾಜಲಕ್ಷ್ಮಿ, ಸೌಮ್ಯ, ನಗರಸಭಾ ಸದಸ್ಯರಾದ ಬಿ.ಟಿ.ರಮೇಶ್‌ಗೌಡ, ಕೆ.ವೀರಭದ್ರಪ್ಪ, ನಾಮಿನಿ ಸದಸ್ಯ ಬಡಗಿಪಾಪಣ್ಣ ಮುಂತಾದವರು ಉಪಸ್ಥಿತರಿದ್ದರು.

| ಚಿನ್ನದ ಬೆಲೆ | |
|---|---|
| 91.6 ಕೆಡಿಎಂ (ಗ್ರಾಂ) | 5830 |
| 85 ಕೆಡಿಎಂ (ಗ್ರಾಂ) | 5330 |



| ಬೆಳ್ಳಿ ಬೆಲೆ | |
|---|---|
| ಕೆಜಿ | 67500 |



## ಫಾಸ್ಟ್ ನ್ಯೂಸ್

### ಅಂಗನವಾಡಿ ಕಾರ್ಯಕರ್ತರಿಂದ ಇಂದು ಬೆಂಗಳೂರು ಚಲೋ

» ಮೊದಲ ಪುಟದಿಂದ

ನಗರದ ಪ್ರವಾಸಿಮಂದಿರದಲ್ಲಿ ಧರಣಿ ಸತ್ಯಾಗ್ರಹದ ಬಗ್ಗೆ ಮಾಹಿತಿ ನೀಡಿದ ಅವರು, ಈಗಾಗಲೇ ಸಂಬಂಧಪಟ್ಟ ಎಲ್ಲಾ ಅದಿಕಾರಿಗಳು ಹಾಗೂ ಚುನಾಯಿತ ಜನಪ್ರತಿನಿಧಿಗಳಿಗೆ ಲಿಖಿತ ಮೂಲಕ ಮನವಿ ಮಾಡಿದೆ. ಎಲ್ಲಾ ಶಾಸಕರಿಗೂ ಮನವಿ ನೀಡಿ ಸರ್ಕಾರಿ ಶಾಲೆಯಲ್ಲಿ ಎಲ್‌ಕೆಜಿ, ಯುಕೆಜಿ ಆರಂಭಿಸಿದರೆ ಅಂಗನವಾಡಿಗಳನ್ನು ಮುಚ್ಚಬೇಕಲ್ಲದೆ, ಲಕ್ಷಾಂತರ ಅಂಗನವಾಡಿ ಕಾರ್ಯಕರ್ತರು, ಸಹಾಯಕಿಯರ ಬದುಕು ಅತಂತ್ರವಾಗಲಿದೆ. ಸರ್ಕಾರ ಈ ಬಗ್ಗೆ ಗಂಭೀರ ಚಿಂತನೆ ನಡೆಸಿ ಸರ್ಕಾರಿ ಶಾಲೆಗಳಲ್ಲಿ ಎಲ್‌ಕೆಜಿ,. ಯುಕೆಜಿ ಸ್ಥಾಪನೆ ವಿಷಯವನ್ನು ಕೈಬಿಡಬೇಕೆಂದು ಆಗ್ರಹಿಸಿದರು. ಅಂಗನವಾಡಿ ಕಾರ್ಮಿಕ ಫೆಡರೇಷನ್ ತಾಲ್ಲೂಕು ಅಧ್ಯಕ್ಷ ಎಂ.ಪದ್ಮಕ್ಕ, ಪ್ರಧಾನ ಕಾರ್ಯದರ್ಶಿ ಪದ್ಮಮ್ಮ, ಮಂಜುಳಾ, ನಾಗರತ್ನ ಮುಂತಾದವರು ಉಪಸ್ಥಿತರಿದ್ದರು.

### ಸರ್ವ ಸದಸ್ಯರ ಸಭೆ

» ಚಿತ್ರದುರ್ಗ

ಚಿತ್ರದುರ್ಗ ತಾಲ್ಲೂಕು ಅಖಿಲ ಭಾರತ ಗಾಣಿಗರ ಸಂಘ(ರಿ.)ದವತಿಯಿಂದ ಪ್ರಪ್ರಥಮ ಜಿಲ್ಲಾ ಮಟ್ಟದ ಗಾಣಿಗ ಸಮುದಾಯದ ವಧು–ವರರ ಸಮಾವೇಶ ಮತ್ತು ಪ್ರತಿಭಾ ಪುರಸ್ಕಾರ ಸಮಾರಂಭ ಹಾಗೂ 2023–24 ನೇ ಸಾಲಿನ ಸರ್ವಸದಸ್ಯರ ವಾರ್ಷಿಕ ಮಹಾಸಭೆಯೂ ಜೂ.30ರ ಭಾನುವಾರ ಬೆಳಿಗ್ಗೆ 10.30 ಗಂಟೆಗೆ ಶ್ರೀ ಜಗದ್ಗುರು ಪಂಚಾಚಾರ್ಯ ಕಲ್ಯಾಣ ಮಂಟಪದಲ್ಲಿ ಹಮ್ಮಿಕೊಳ್ಳಲಾಗಿದೆ ಎಂದು ಸಂಘದ ಅಧ್ಯಕ್ಷರಾದ ಎ.ಆರ್.ತಿಪ್ಪೇಸ್ವಾಮಿ ಹಾಗೂ ಕಾರ್ಯದರ್ಶಿ ಟಿ.ಪಿ.ಜ್ಞಾನಮೂರ್ತಿ ತಿಳಿಸಿದ್ದಾರೆ. ಕಾರ್ಯಕ್ರಮದ ದಿವ್ಯ ಸಾನಿಧ್ಯವನ್ನು ಶ್ರೀ ಜಗದ್ಗುರು ಮುರುಘಾರಾಜೇಂದ್ರ ವಿದ್ಯಾಪೀಠ, ಬೃಹನ್ಮಠದ ಆಡಳಿತ ಮಂಡಳಿ ಸದಸ್ಯರು, ವಿಜಯಪುರದ ವನಶ್ರೀ ಸಂಸ್ಥಾನ ಮಠದ ಪೀಠಾಧ್ಯಕ್ಷರಾದ ಡಾ. ಜಯಬಸವಕುಮಾರ ಸ್ವಾಮೀಜಿ ವಹಿಸಲಿದ್ದಾರೆ. ಕಾರ್ಯಕ್ರಮದ ಉದ್ಘಾಟನೆಯನ್ನು ಅಥಣಿ ವಿಧಾನ ಸಭಾ ಕ್ಷೇತ್ರ ಶಾಸಕರಾದ ಎಸ್. ಲಕ್ಷ್ಮಣ್ ಸವದಿ ನೇರವೇರಿಸಲಿದ್ದಾರೆ. ಅಧ್ಯಕ್ಷತೆಯನ್ನು ಜಿಲ್ಲಾ ಗಾಣಿಗರ ಸಂಘದ ಅಧ್ಯಕ್ಷರಾದ ಡಿ.ಎಸ್. ಸುರೇಶ್‌ಬಾಬು (ಸೈಟ್ ಬಾಬಣ್ಣ) ವಹಿಸಲಿದ್ದಾರೆ. ಸಮಾರಂಭದಲ್ಲಿ ಚಿತ್ರದುರ್ಗ ವಿಧಾನಸಭಾ ಶಾಸಕರಾದ ಕೆ.ಸಿ. ವೀರೇಂದ್ರ (ಪಪ್ಪಿ), ಭದ್ರಾವತಿ ವಿಧಾನ ಸಭಾ ಕ್ಷೇತ್ರದ ಶಾಸಕರಾದ ಬಿ.ಕೆ. ಸಂಗಮೇಶ್, ಬಾಗಲಕೋಟೆ ಕ್ಷೇತ್ರದ ಸಂಸದರಾದ ಪಿ.ಸಿ.ಗದ್ದಿಗೌಡರ, ಅ.ಭಾ.ಗಾಣಿಗರ ಸಂಘದ ರಾಜ್ಯ ಕಾರ್ಯಾಧ್ಯಕ್ಷರಾದ ಮಲ್ಲಿಕಾರ್ಜುನ ಲೋಣಿ ಹಾಗೂ ತಾಲ್ಲೂಕು ಗಾಣಿಗರ ಸಂಘದ ಅಧ್ಯಕ್ಷರಾದ ಎ.ಆರ್. ತಿಪ್ಪೇಸ್ವಾಮಿ ಅ.ಭಾ. ಗಾಣಿಗರ ಸಂಘದ ಬೆಂಗಳೂರು ವಿಭಾಗದ ಹಿರಿಯ ಉಪಾಧ್ಯಕ್ಷರಾದ ಟಿ.ಎಸ್.ರುದ್ರಮುನಿ, ಕೆ.ಡಿ.ಪಿ. ಸದಸ್ಯರು, ವೀರಶೈವ ಸಮಾಜದ ಉಪಾಧ್ಯಕ್ಷರು, ಜಿಲ್ಲಾ ಗಾಣಿಗ ಸಮಾಜದ ಕಾರ್ಯದರ್ಶಿ ಕೆ.ಸಿ. ನಾಗರಾಜ್, ಮಹಿಳಾ ಕಾರ್ಯಕಾರಿ ಸಮಿತಿಯ ಗೌರವಾಧ್ಯಕ್ಷರಾದ ಶ್ರೀಮತಿ ಕೆ.ಸಿ.ವೀಣಾ, ಅಧ್ಯಕ್ಷರಾದ ಶ್ರೀಮತಿ ಪುಷ್ಪ ಭಾಗವಹಿಸಲಿದ್ದಾರೆ. ವಿಶೇಷ ಸನ್ಮಾನಿತರಾಗಿ ಝೀ ಟಿ.ವಿ. ಮಹಾನಟಿ ರಿಯಾಲಿಟಿ ಷೋನ ಕುಮಾರಿ ಗಗನ ಬಾರಿ ಆಗಮಿಸಲಿದ್ದಾರೆ. ವಧು–ವರರು ನೋಂದಾಯಿಸಿಕೊಳ್ಳಲು ಸಂಪರ್ಕಿಸಬೇಕಾದ ಮೊಬೈಲ್ ಸಂಖ್ಯೆ 9449974004, 9448803174, 9481722217 ಹೆಚ್ಚಿನ ಮಾಹಿತಿಗಾಗಿ 9449974004, 9448154819, 9448803174, 9481722217 ಈ ದೂರವಾಣಿ ಸಂಪರ್ಕ ಮಾಡಬಹುದಾಗಿದೆ.

### ತರಬೇತಿಗೆ ಅರ್ಜಿ ಆಹ್ವಾನ

» ಚಿತ್ರದುರ್ಗ

ಸಾರ್ವಜನಿಕ ಗ್ರಂಥಾಲಯ ಇಲಾಖೆ ಅಡಿಯಲ್ಲಿ ರಾಜ್ಯದ ನಾಲ್ಕು ಕಂದಾಯ ವಿಭಾಗಗಳಾದ ಬೆಂಗಳೂರು,ಮೈಸೂರುವಿಭಾಗದಮಂಗಳೂರು, ಬೆಳಗಾವಿ ವಿಭಾಗದ ಧಾರವಾಡ ಮತ್ತು ಕಲಬುರಗಿ ವಿಭಾಗಗಳಲ್ಲಿ 6 ತಿಂಗಳ ಅವಧಿಯ ಗ್ರಂಥಾಲಯ ವಿಜ್ಞಾನ ತರಬೇತಿ ಶಾಲೆಗಳನ್ನು ನಡೆಸಲಾಗುತ್ತಿದೆ. ಅದಕ್ಕೆ ಸಂಬಂಧಪಟ್ಟಂತೆ ಪಿಯುಸಿ ಪರೀಕ್ಷೆಯಲ್ಲಿ ಕನಿಷ್ಠ 40%, ಎಸ್.ಸಿ, ಎಸ್.ಟಿ ಗೆ 35% ರಷ್ಟು ಅಂಕ ಪಡೆದ ಅಭ್ಯರ್ಥಿಗಳು ಈ ತರಬೇತಿಗೆ ಅರ್ಹರಾಗಿರುತ್ತಾರೆ. ಅರ್ಜಿ ಸಲ್ಲಿಸಲು ಜುಲೈ 19 ಕೊನೆಯ ದಿನವಾಗಿದೆ. ಹಾಲಿ ಕಾರ್ಯ ನಿರ್ವಹಿಸುತ್ತಿರುವ ಇಲಾಖೆಯ 'ಡಿ' ದರ್ಜೆಯ ಗ್ರಂಥಾಲಯ ಸಹವರ್ತಿಗಳು ಸಂಬಂಧಪಟ್ಟ ಉಪನಿರ್ದೇಶಕರು, ಮುಖ್ಯ ಗ್ರಂಥಾಲಯಾಧಿಕಾರಿಗಳ ಮುಖಾಂತರ ಹಾಗೂ ಗ್ರಾಮ ಪಂಚಾಯತಿ ಗ್ರಂಥಾಲಯ ಮೇಲ್ವಿಚಾರಕರು ಸಂಬಂಧಪಟ್ಟ ಪಂಚಾಯ್ತಿ ಅಭಿವೃದ್ಧಿ ಅಧಿಕಾರಿಗಳ ಮುಖಾಂತರ ಮತ್ತು ಇತರ ಸಂಸ್ಥೆಯಿಂದ ಬರುವ ಅಭ್ಯರ್ಥಿಗಳು ತಮ್ಮ ಸಂಸ್ಥೆಯ ಮುಖ್ಯಸ್ಥರ ಮುಖಾಂತರ ಅರ್ಜಿಯನ್ನು ಸಲ್ಲಿಸಬಹುದು. ಸಾಮಾನ್ಯ ಅಭ್ಯರ್ಥಿಗಳು ಪಿಯುಸಿ ಅಂಕಪಟ್ಟಿ, ಜಾತಿ ಪ್ರಮಾಣ ಪತ್ರ, ಮೀಸಲಾತಿ ಹೊಂದಿದ್ದಲ್ಲಿ ಕನ್ನಡ ಮಾಧ್ಯಮ, ಗ್ರಾಮೀಣ ಮಾಧ್ಯಮ, ಮಾಜಿ ಸೈನಿಕ, 371ಎ ಪ್ರಮಾಣ ಪತ್ರಗಳ ದೃಡೀಕೃತ ನಕಲು ಪ್ರತಿಗಳನ್ನು ಸಲ್ಲಿಸಬೇಕು.ಹೆಚ್ಚಿನ ಮಾಹಿತಿಗಾಗಿ ಬೆಂಗಳೂರು ರಾಜ್ಯ ಕೇಂದ್ರ ಗ್ರಂಥಾಲಯ, ಕಬ್ಬನ್ ಉದ್ಯಾನವನ ಉಪನಿರ್ದೇಶಕರ ಕಚೇರಿ ದೂರವಾಣಿ ಸಂಖ್ಯೆ 080–22212128.

# 28ರಂದು ಬಿಜೆಪಿಯಿಂದ ಡಿಸಿ ಕಚೇರಿ ಮುತ್ತಿಗೆ

» ಚಿತ್ರದುರ್ಗ

ರಾಜ್ಯದಲ್ಲಿ ಕಾಂಗ್ರೆಸ್ ನೇತೃತ್ವದ ಸರ್ಕಾರ ಅಧಿಕಾರಕ್ಕೆ ಬಂದು ಒಂದು ವರ್ಷಕ್ಕೆ ಒಬ್ಬ ಸಚಿವರು ರಾಜಿನಾಮೆ ಸಲ್ಲಿಸಲು ಕಾರಣವಾಗಿರುವ ವಾಲ್ಮೀಕಿ ಅಭಿವೃದ್ಧಿ ನಿಗಮದ ಹಗರಣದ ವಿಚಾರವಾಗಿ ಬಿಜೆಪಿ ಪ್ರತಿಭಟನೆ ತೀವ್ರಗೊಳಿಸಲು ಮುಂದಾಗಿದೆ. ಜೂನ್ 28 ರಂದು ರಾಜ್ಯಾದ್ಯಂತ ಬಿಜೆಪಿ ಪ್ರತಿಭಟನೆ ನಡೆಸಲಿದ್ದು, ಮುಖ್ಯಮಂತ್ರಿ ಸಿದ್ದರಾಮಯ್ಯ ರಾಜಿನಾಮೆಗೆ ಒತ್ತಡ ಹಾಕಲಿದ್ದಾರೆ.

ಚಿತ್ರದುರ್ಗದ ಬಿಜೆಪಿ ಕಚೇರಿಯಲ್ಲಿ ಶ್ರೀ ಮಹರ್ಷಿ ವಾಲ್ಮೀಕಿ ನಿಗಮದಿಂದ 187:33 ಕೋಟಿ ರೂ.ಗಳು ಅಕ್ರಮ ವರ್ಗಾವಣೆ ವಿಚಾರವಾಗಿ ಚಿತ್ರದುರ್ಗ ಎಸ್ಟಿ ಮೋರ್ಚಾದ ಪೂರ್ವಭಾವಿ ಸಭೆಯಲ್ಲಿ ತೀರ್ಮಾನಿಸಲಾಯಿತು. ಪರಿಶಿಷ್ಟ ಪಂಗಡದ ವಾಲ್ಮೀಕಿ ಸಮುದಾಯ ಚಿತ್ರದುರ್ಗ ಜಿಲ್ಲೆಯಲ್ಲಿ ಹೆಚ್ಚಿನ ಸಂಖ್ಯೆಯಲ್ಲಿರುವುದರಿಂದ, ಕೋಟೆನಾಡಿನಲ್ಲಿ ಬಿಜೆಪಿ ದೊಡ್ಡ ಮಟ್ಟದಲ್ಲಿ ಪ್ರತಿಭಟನೆ ನಡೆಸಲು ತೀರ್ಮಾನಿಸಿದೆ. ಖುದ್ದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಚಿತ್ರದುರ್ಗಕ್ಕೆ ಆಗಮಿಸಲಿದ್ದು, ಜೂ.28 ರಂದು ನಡೆಯುವ ಬೃಹತ್ ಪ್ರತಿಭಟನೆಯಲ್ಲಿ ಭಾಗವಹಿಸಿ ಸಾವಿರಾರು ಕಾರ್ಯಕರ್ತರೊಂದಿಗೆ ಜಿಲ್ಲಾಧಿಕಾರಿ ಕಚೇರಿಗೆ ಮುತ್ತಿಗೆ ಹಾಕಲು ಯೋಜನೆ ರೂಪಿಸಲಾಗಿದೆ. ಈಗಾಗಲೇ ರಾಜ್ಯ ಹಾಗೂ ಜಿಲ್ಲಾ ಮಟ್ಟದಲ್ಲಿ ಬಿಜೆಪಿ ಎಸ್ಟಿ ಮೋರ್ಚಾ ನೇತೃತ್ವದಲ್ಲಿ ಸಭೆಗಳು ನಡೆದಿದ್ದು, ಪೂರ್ವ ಸಿದ್ಧತೆ ಮಾಡಿಕೊಳ್ಳಲಾಗಿದೆ. ಜೂ.21 ರಂದು ಚಿತ್ರದುರ್ಗದ ಬಿಜೆಪಿ ಕಚೇರಿಯಲ್ಲಿ ಹಲವು ಮುಖಂಡರು, ಎಸ್ಟಿ ಮೋರ್ಚಾ ನೇತೃತ್ವದಲ್ಲಿ ಪ್ರತಿಭಟಿಸಲು ತೀರ್ಮಾನಿಸಿದ್ದಾರೆ. ಸಿದ್ದರಾಮಯ್ಯ ನೇತೃತ್ವದ ರಾಜ್ಯ ಸರ್ಕಾರ ಎಸ್ಸಿ, ಎಸ್ಟಿಗಳಿಗೆ ಸೇರಿದ ಅನುದಾನವನ್ನು ದುರ್ಬಳಕೆ ಮಾಡಿಕೊಳ್ಳುತ್ತಿದೆ. ಪಕ್ಕದ ಆಂಧ್ರಪ್ರದೇಶಕ್ಕೆ ಕರ್ನಾಟಕದ ವಾಲ್ಮೀಕಿ ನಿಗಮದ ಹಣ ವರ್ಗಾವಣೆಆಗಿದೆ.ಇದಕ್ಕೆಸಂಬಂಧಿಸಿದಂತೆ ಈಗಾಗಲೇ ಸಚಿವ ಬಿ.ನಾಗೇಂದ್ರ ಅವರ ರಾಜಿನಾಮೆ ಸಲ್ಲಿಕೆಯಾಗಿದೆ. ಆದರೆ, ಇಷ್ಟಕ್ಕೆ ಬಿಡದ ಬಿಜೆಪಿ, ಇದು ಮುಖ್ಯಮಂತ್ರಿಗಳ ಪಾತ್ರವಿಲ್ಲದೆ ನಡೆದಿಲ್ಲ. ಹಾಗಾಗಿ ಅವರ ರಾಜಿನಾಮೆಯನ್ನೂ ಪಡೆಯಬೇಕು ಎಂದು ಪಟ್ಟು ಹಿಡಿದಿದ್ದಾರೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಬಳಿಯೇ ಹಣಕಾಸು ಇಲಾಖೆ ಇದೆ. ಹಾಗಾಗಿ ಅವರು ರಾಜಿನಾಮೆ ನೀಡಬೇಕು ಎಂದು ಬಿಜೆಪಿ ಒತ್ತಾಯಿಸಲಿದೆ.

ಈ ಸಂದರ್ಭದಲ್ಲಿ ಜಿಲ್ಲಾಧ್ಯಕ್ಷರಾದ ಎ.ಮುರುಳಿ, ವಿಧಾನ ಪರಿಷತ್ ಸದಸ್ಯರು ರಾಜ್ಯ ವಕ್ತರರಾದ ಕೆ.ಎಸ್. ನವೀನ್ ರವರು ಮಾಜಿ ಶಾಸಕರಾದ ಎಸ್.ತಿಪ್ಪೇಸ್ವಾಮಿ ರವರು ಚಿತ್ರದುರ್ಗ ಮಾಜಿ ಶಾಸಕರು ಜಿ.ಎಸ್ ತಿಪ್ಪಾರೆಡ್ಡಿ, ಚಳ್ಳಕೆರೆ ಬಿಜೆಪಿ ಮುಖಂಡರು ಕೆ.ಟಿ ಕುಮಾರಸ್ವಾಮಿ ಎಸ್.ಟಿ. ಮೋರ್ಚಾ ಜಿಲ್ಲಾದ್ಯಕ್ಷ ಶಿವಣ್ಣ, ಜಿಲ್ಲಾ ಪ್ರಧಾನ ಕಾರ್ಯದರ್ಶಿಗಳು ರಾಮದಾಸ್, ದೇವರಾಜ್ ಮತ್ತು ಎಲ್ಲಾ ತಾಲ್ಲೂಕಿನ ಸಮಾಜದ ಮುಖಂಡರು ಮೋರ್ಚಾ ಅಧ್ಯಕ್ಷರು ಪದಾಧಿಕಾರಿಗಳು ಜಿಲ್ಲಾ ಪಂಚಾಯತ್ ಸದಸ್ಯರು ಈ ಸಭೆಯಲ್ಲಿ ಭಾಗವಹಿಸಿದರು.

# ಭಾರತೀಯ ಯೋಗ ವಿಶ್ವಕ್ಕೆ ಮಾದರಿ: ಸ್ವಾಮೀಜಿ

» ಚಿತ್ರದುರ್ಗ

ಚಿತ್ರದುರ್ಗ ಜಿಲ್ಲೆ ಹಿರಿಯೂರು ತಾಲ್ಲೂಕಿನ ಐಮಂಗಲ ಗ್ರಾಮದಲ್ಲಿ ಶ್ರೀ ಹರಳಯ್ಯ ಗುರುಪೀಠ, ಶ್ರೀ ಮಹಾಶಿವಶರಣ ಹರಳಯ್ಯ ವಿದ್ಯಾಸಂಸ್ಥೆ. (ರಿ)ಹಾಗೂ ಶ್ರೀ ಮಹಾಶಿವಶರಣ ಹರಳಯ್ಯ ಆಂಗ್ಲ ಮಾಧ್ಯಮ ಹಿರಿಯ ಪ್ರಾಥಮಿಕ ಶಾಲೆವತಿಯಿಂದ ನಡೆದ ವಿಶ್ವ ಯೋಗ ದಿನಾಚರಣೆ ಕಾರ್ಯಕ್ರಮದ ದಿವ್ಯ ಸಾನಿಧ್ಯ ಮಾತನಾಡಿದ ಶ್ರೀ ಬಸವ ಹರಳಯ್ಯ ಮಹಾಸ್ವಾಮೀಜಿಯವರು ನಮ್ಮ ದೇಶದ ಯೋಗವನ್ನು ಅಂತಾರಾಷ್ಟ್ರೀಯ ಮಟ್ಟದಲ್ಲಿ ಆಚರಿಸುತ್ತಿರುವುದು ನಮ್ಮ ದೇಶ ದೇಶಕ್ಕೆ ತಂದ ಗೌರವವಾಗಿದೆ ಯೋಗ ಬಲ್ಲವನಿಗೆ ರೋಗವಿಲ್ಲ ಆದ್ದರಿಂದ ಅಂತರಂಗ ಶುದ್ದಿಗಾಗಿ ಯೋಗವನ್ನು ಅಭ್ಯಾಸ ಮಾಡಬೇಕು ಎಂದರು.

ಕಾರ್ಯಕ್ರಮ ಉದ್ಘಾಟನೆ ಪತಂಜಲಿ ಮಹಿಳಾ ಯೋಗ ಶಿಕ್ಷಣ ಸಂಸ್ಥೆಯ ಯೋಗ ಶಿಕ್ಷಕರಾದ ಶ್ರೀಮತಿ ಹೇಮಾವತಿ ಜಾನರ್ಜನೆ ಮಾಡಲು ಇವಾಗ ಉಪಯೋಗವಾಗುತ್ತದೆ ಮಕ್ಕಳ ಮನೋವಿಕಾಸಕ್ಕೆ ಪೂರಕವಾಗಿ ಯೋಗವನ್ನು ಅಳವಡಿಸಿಕೊಳ್ಳಬೇಕಾಗಿದೆ ಎಂದರು

ಶ್ರೀಮತಿ ಶೋಭಾ ಮಾತನಾಡಿ ಮಕ್ಕಳಿಗೆ ಗುರುಗಳ ಮಾರ್ಗದರ್ಶನದೊಂದಿಗೆ ಯೋಗವನ್ನು ಕಲಿಸುವ ಮೂಲಕ ಮಕ್ಕಳಿಗೆ ಸಂಸ್ಕಾರ ನೀಡುತ್ತಿರುವ ಸಂಸ್ಥೆಗೆ ಅಭಿನಂದನೆಗಳುಎಂದರು

ಹಿರಿಯ ಚಿಂತಕ ಬುಡನ್ ಸಾಬ್ ಮಾತನಾಡಿ ಅಂತರಂಗ ಮತ್ತು ಬಹಿರಂಗದ ಶುದ್ಧತೆಗಾಗಿ ಯೋಗ ಅವಶ್ಯಕತೆ ಇದೆ ಗುಣಾತ್ಮಕ ಚಿಂತನೆಗಳನ್ನು ಅಳವಡಿಸಿಕೊಳ್ಳಲು ಯೋಗ ಸಹಕಾರಿ ಆಗಿದೆ ಎಂದರು

ಕಾರ್ಯಕ್ರಮದ ಪ್ರಾಸ್ತಾವಿಕ ಮಾತನಾಡಿದ ತಿಪ್ಪೇಸ್ವಾಮಿ ಸ್ವಾಮೀಜಿಗಳು ಯೋಗ ಜ್ಞಾನವನ್ನು ಕರಗತ ಮಾಡಿಕೊಂಡು ಸಿಂಧೂ ಬಯಲಿನ ನಾಗರಿಕತೆಯಿಂದ ಯೋಗಶಾಸ್ತ್ರವು ಶಾಂತಿಯಲ್ಲಿದೆ ಪತಂಜಲಿ ಮಹರ್ಷಿಯ ಯೋಗದ ಪಿತಾಮಹ ದೇಹ ನಿಯಂತ್ರಣಕ್ಕೆ ಉಸಿರಾಟದ ನಿಯಂತ್ರಣಕ್ಕೆ ಯೋಗ ಸಹಕಾರಿಯಾಗಿದೆ ಐದು ನೂರು ವರ್ಷಗಳ ಇತಿಹಾಸ ಯೋಗಕ್ಕಿದೆ ಎಂದರು.

ಕಲಾವಿದ ಡಿ.ಶ್ರೀಕುಮಾರ್ ಕಾರ್ಯಕ್ರಮ ನಿರೂಪಿಸಿದರು ಕೆ.ಪವಿತ್ರ ಪ್ರಾರ್ಥಿಸಿದರು. ಕುಮಾರಿ ರಕ್ಷಿತಾ ಸ್ವಾಗತಿಸಿದರು. ಛಾಯಾವಂದಿಸಿದರು. ವೇದಿಕೆಯಲ್ಲಿ ಮುಖ್ಯ ಶಿಕ್ಷಕರಾದ ಹರೀಶ್, ವ್ಯವಸ್ಥಾಪಕ ಡಿ ನಾಗಾರ್ಜುನ್ ಉಪಸ್ಥಿತರಿದ್ದರು.

# ಯೋಗಕ್ಷೇಮಕ್ಕೆ ಯೋಗ ಮೌಲ್ಯಯುತ ಸಮಗ್ರ ವಿಧಾನ

» ದಾವಣಗೆರೆ

ಯೋಗವು ನಮ್ಮ ಪ್ರಾಚೀನ ಸಂಪ್ರದಾಯದಿಂದ ಅಮೂಲ್ಯ ಕೊಡುಗೆಯಾಗಿದೆ. ಯೋಗವು ಮನಸ್ಸು ಮತ್ತು ದೇಹ, ಆಲೋಚನೆ ಮತ್ತು ಕ್ರಿಯೆಯ ಏಕತೆಯನ್ನು ಒಳಗೊಂಡಿರುತ್ತದೆ ಎಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ರಾಜೇಶ್ವರಿ ಎನ್.ಹೆಗಡೆ ಹೇಳಿದರು.

ಜಿಲ್ಲಾ ನ್ಯಾಯಾಂಗ, ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ, ಜಿಲ್ಲಾ ವಕೀಲರಸಂಘಹಾಗೂಆಯುಷ್ಯ್ ಇಲಾಖೆ,ಇವರಸಂಯುಕ್ತಾಶ್ರಯದಲ್ಲಿ ನ್ಯಾಯಾಲಯದ ಸಂಕೀರ್ಣದ ಹಮ್ಮಿಕೊಂಡಿದ್ದ ಅಂತರಾಷ್ಟ್ರೀಯ ಯೋಗ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.ನಮ್ಮ ಆರೋಗ್ಯ ಮತ್ತು ಯೋಗಕ್ಷೇಮಕ್ಕೆ ಯೋಗವು ಮೌಲ್ಯಯುತವಾದ ಒಂದು ಸಮಗ್ರ ವಿಧಾನ, ಅದು ಕೇವಲ ವ್ಯಾಯಾಮವಲ್ಲ. ಪ್ರಪಂಚ ಮತ್ತು ಪ್ರಕೃತಿಯೊಂದಿಗೆ ಏಕತೆಯ ಅರ್ಥವನ್ನು ಕೊಂಡುಕೊಳ್ಳುವ ಮಾರ್ಗವಾಗಿದೆ ಎಂದು ವಿವರಿಸಿದರು.ಸಮಾರಂಭದ ಅಧ್ಯಕ್ಷತೆ ವಹಿಸಿದ್ದ ಜಿಲ್ಲಾ ವಕೀಲರ ಸಂಘದ ಅಧ್ಯಕ್ಷ ಎಲ್.ಹೆಚ್.ಅರುಣ್ ಕುಮಾರ್ ಮಾತನಾಡಿ, ಸ್ವಯಂ ಮತ್ತು ಸಮಾಜಕ್ಕಾಗಿ ಯೋಗ ಎನ್ನುವ ಧ್ಯೇಯದೊಂದಿಗೆ 2024ರ ಅಂತಾರಾಷ್ಟ್ರೀಯ ಯೋಗ ದಿನವನ್ನು ಆಚರಿಸಲಾಗುತ್ತಿದೆ. ಜನತೆಯ ಯೋಗ ಕ್ಷೇಮವನ್ನು ಹೆಚ್ಚಿಸುವುದು. ಸಕಾರಾತ್ಮಕ ಮತ್ತು ಸಾಮರಸ್ಯದ ಸಮಾಜವನ್ನು ಬೆಳೆಸುವುದು ಯೋಗದ ಉದ್ದೇಶವಾಗಿದೆ ಎಂದು ತಿಳಿಸಿದರು.ಕಾರ್ಯಕ್ರಮದಲ್ಲಿ 1ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಮಂಜಪ್ಪ ಹನುಮಂತಪ್ಪ ಅಣ್ಣಯ್ಯನವರ, 2ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಆರ್.ಎನ್.ಪ್ರವೀಣ್‌ಕುಮಾರ್, ಮಕ್ಕಳ ಸ್ನೇಹಿ ನ್ಯಾಯಾಲಯದ ನ್ಯಾಯಾಧೀಶರಾದ ಶ್ರೀರಾಮ ನಾರಾಯಣ ಹೆಗಡೆ, ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರಾದ ಟಿ.ಎಂ.ನಿವೇದಿತಾ, ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಮಹಾವೀರ ಮ.ಕರೆಣ್ಣವರ, ನ್ಯಾಯಾಂಗ ಮುಖ್ಯ ಆಡಳಿತಾಧಿಕಾರಿ ಬಿ.ಶ್ರೀನಿವಾಸ್, ವಕೀಲರ ಸಂಘದ ಉಪಾಧ್ಯಕ್ಷ ಜಿ.ಕೆ.ಬಸವರಾಜ್ ಗೋಪನಾಳು, ಕಾರ್ಯದರ್ಶಿ ಎಸ್.ಬಸವರಾಜ್, ಅಂತಾರಾಷ್ಟ್ರೀಯ ಯೋಗ ಪ್ರಶಸ್ತಿ ವಿಜೇತರಾದ ಮಂಜುನಾಥ್, ಗೀತಮ್ಮ, ಜಿಲ್ಲಾಸ್ಪತ್ರೆ ಯೋಗ ಮತ್ತು ಪ್ರಕೃತಿ ಚಿಕಿತ್ಸಾ ವಿಭಾಗದ ಡಾ.ಮಂದಾಕಿನಿ ಸೇರಿದಂತೆ ಸ್ಥಳೀಯ ಎಲ್ಲಾ ನ್ಯಾಯಾಧೀಶರು, ನ್ಯಾಯಾಲಯದ ಸಿಬ್ಬಂದಿ, ವಕೀಲರು ಭಾಗವಹಿಸಿದ್ದರು.

# ಶಿಕ್ಷಕನ ಮನೆಗೆ ನುಗ್ಗಿ ಬೆಳ್ಳಿ, ಬಂಗಾರ, ಹಣದೊಂದಿಗೆ ಪರಾರಿ

» ಮೊದಲ ಪುಟದಿಂದ

ಒಟ್ಟು 3.50 ಲಕ್ಷ ಬಂಗಾರದ ಆಭರಣ, 20 ಸಾವಿರ ಮೌಲ್ಯದ ಬೆಳ್ಳಿ ಆಭರಣ ಹಾಗೂ 25 ಸಾವಿರ ನಗದು ಹಣ ದೋಚಿದ್ದು, ಹಿರಿಯ ಅಧಿಕಾರಿಗಳ ಮಾರ್ಗದರ್ಶನದಲ್ಲಿ ಪಿಎಸ್‌ಐ ಧರೆಪ್ಪಾಬಾಳಪ್ಪ ದೊಡ್ಡಮನಿ ಪ್ರಕರಣ ದಾಖಲಿಸಿದ್ದಾರೆ.

ದಿಢೀರನೇ ಮನೆಗೆ ನುಗ್ಗಿದ ಕಳ್ಳರು ಭಯಹುಟ್ಟಿಸಿದ ಹಿನ್ನೆಲೆಯಲ್ಲಿ ಶಿಕ್ಷಕ ಈರಣ್ಣ, ಪತ್ನಿ ರಾಧ ದರೋಡೆಕೋರರು ಹೇಳಿದ ರೀತಿಯಲ್ಲೇ ಕಿವಿಯಲ್ಲಿದ್ದ ಬಂಗಾರದ ಒಲೇ, ಜುಮುಕಿ, ಬೆಂಡೋಲೆ, ಕುತ್ತಿಗೆಯಲ್ಲಿದ್ದ ಮಾಂಗಲ್ಯ 

# ಯೋಗಾದಿಂದ ರೋಗಮುಕ್ತ ಜೀವನ: ತಾಜ್ ಪೀರ್

» ಚಿತ್ರದುರ್ಗ

ಮಕ್ಕಳಿಗೆ ಚಿಕ್ಕ ವಯಸ್ಸಿನಿಂದಲೇ ಯೋಗವನ್ನುಅಭ್ಯಾಸಮಾಡಿಸುವುದರಿಂದ ಮುಂದೆ ಅವರು ವಿವಿಧ ರೋಗಗಳಿಂದ ಮುಕ್ತರಾಗಲು ಸಾಧ್ಯವಿದೆ ಎಂದು ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಎಂ.ಕೆ.ತಾಜ್‌ಪೀರ್ ಹೇಳಿದರು.

ನಗರದ ಜೋಗಿಮಟ್ಟಿ ರಸ್ತೆಯಲ್ಲಿರುವ ದಾರುಕ ಬಡಾವಣೆಯ ಗಣಪತಿ ದೇವಸ್ಥಾನದ ಮುಂಭಾಗದಲ್ಲಿ ಬಡಾವಣೆಯ ಸದಸ್ಯರು ಸೇರಿಕೊಂಡು ಭಾನುವಾರ ಹಮ್ಮಿಕೊಂಡಿದ್ದ 10ನೇ ಅಂತರಾಷ್ಟ್ರೀಯ ದಿನಾಚರಣೆಯ ಅಂಗವಾಗಿ ಯೋಗ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು.

ಯೋಗವನ್ನು ಈ ಭಾಗದಲ್ಲಿ ಹೆಚ್ಚಿನ ರೀತಿಯಲ್ಲಿ ಪ್ರಚಾರಕ್ಕೆ ತಂದವರೆದರೇ ಮಲ್ಲಾಡಿಹಳ್ಳಿಯ ರಾಘವೇಂದ್ರ ಶ್ರೀಗಳು. ಅವರು ದಿನ ನಿತ್ಯ ಯೋಗವನ್ನು ಮಾಡದೇ ತಮ್ಮ ದಿನಚರಿಯನ್ನು ಆರಂಭ ಮಾಡುತ್ತಿರಲಿಲ್ಲ.

ತಾವು ಮಾಡುವುದ್ದಲ್ಲದೆ ಇದನ್ನು ಬೇರೆಯವರಿಗೂ ಸಹಾ ಹೇಳಿ ಕೊಟ್ಟಿದ್ದಾರೆ. ಗ್ರಾಮಗಳಲ್ಲಿ ಯೋಗವನ್ನು ಪರಿಚಯ ಮಾಡಿದ ಕೀರ್ತಿ ಶ್ರೀಗಳಿಗೆ ಸಲ್ಲುತ್ತದೆ. ಇದರಲ್ಲಿ ನಮ್ಮ ತಾತನವರು ಸಹಾ ಒಬ್ಬರಾಗಿದ್ದಾರೆ ಎಂದರು.

ಈಗ ಸಾವಿರಾರು ಜನ ಯೋಗವನ್ನು ದಿನ ನಿತ್ಯ ಅಭ್ಯಾಸ ಮಾಡುವುದರ ಮೂಲಕ ತಮ್ಮ ಆರೋಗ್ಯವನ್ನು ಕಾಪಾಡಿಕೊಳ್ಳುತ್ತಿದ್ದಾರೆ. ಅಂದಿನ ದಿನದಲ್ಲಿಯೇ ಮಲ್ಲಾಡಿಹಳ್ಳಿಯಲ್ಲಿ ಈ ಮುಂಚೆ ಅಂತರಾಷ್ಟ್ರೀಯ ಯೋಗ ಪಟುಗಳುಬಂದುಭೇಟಿಯನ್ನುನೀಡಿದ್ದಾರೆ. ಇಂದಿನ ಯೋಗವನ್ನು 50 ವರ್ಷ ಮೇಲ್ಪಟ್ಟುವರು ಮಾತ್ರ ಮಾಡುತ್ತಿದ್ದಾರೆ ಇದರಲ್ಲಿ ಯುವಜನತೆಗೆ ಆಸಕ್ತಿ ಕಾಣುತ್ತಿಲ್ಲ, ಈ ಹಿನ್ನಲೆಯಲ್ಲಿ ಮನೆಯಲ್ಲಿ ಚಿಕ್ಕ ಮಕ್ಕಳನ್ನು ಮದುವೆ, ನಾಮಕರಣ ಸೇರಿದಂತೆ ವಿವಿಧ ಕಾರ್ಯಕ್ರಮಗಳಿಗೆ ಕರೆದುಕೊಂಡು ಹೋಗುವಂತೆ ಈ ರೀತಿಯ ಯೋಗ ಕಾರ್ಯಕ್ರಮಗಳಿಗೆ ಅವರನು ಕರೆದುಕೊಂಡು ಯೋಗವನ್ನು ಕಲಿಸಬೇಕಿದೆ ಎಂದರು.

ಕೆಡಿಪಿ ಸದಸ್ಯ ಕೆ.ಸಿ.ನಾಗರಾಜ್ ಮಾತನಾಡಿ, ಯೋಗದಿಂದ ಉತ್ತಮವಾದ ಆರೋಗ್ಯವನ್ನು ಹೊಂದಬಹುದಾಗಿದೆ, ಇದನ್ನು ದಿನ ನಿತ್ಯ ಮಾಡುವುದರಿಂದ ಉತ್ತಮವಾದ ಆರೋಗ್ಯವನ್ನು ಪಡೆಯಬಹುದಾಗಿದೆ ಋಷಿ,ಮುನಿಗಳು ಯೋಗವನ್ನು ಮಾಡುವುದರ ಮೂಲಕ ಹಲವಾರು ವರ್ಷ ಬದುಕಿದ್ದರು. ಆರೋಗ್ಯವನ್ನು ಕಾಪಾಡಿಕೊಳ್ಳಲು ದೇಹವನ್ನು ದಂಡಿಸಬೇಕಿದೆ ಆಗ ಮಾತ್ರ ಆರೋಗ್ಯವನ್ನು ಹೊಂದಬಹುದಾಗಿದೆ. ಹಣವನ್ನುಯಾರುಬೇಕಾದರೂಸಂಪಾದನೆ ಮಾಡುತ್ತಾರೆ ಆದರೆ ಆರೋಗ್ಯವನ್ನು ಸಂಪಾದನೆ ಮಾಡುವತ್ತ ಯಾರೂ ಸಹಾ ಗಮನ ನೀಡಿವುದಿಲ್ಲ ಆರೋಗ್ಯ ಕೆಟ್ಟಾಗ ವೈದ್ಯರ ಬಳಿ ಹೋಗಿ ಅವರು ನೀಡುವ ಮಾತ್ರಯನ್ನು ಸೇವನೆ ಮಾಡಬೇಕಾಗುತ್ತದೆ ಇದರ ಬದಲು ಯೋಗ,ವ್ಯಾಯಾಮ ಮಾಡುವುದರ ಮೂಲಕ ಆರೋಗ್ಯವನ್ನು ಕಾಪಾಡಿಕೊಳ್ಳುವಂತೆ ಕರೆ ನೀಡಿದರು.

ಯೋಗಚಾರ್ಯ ಎಲ್.ಎಸ್. ಚಿನ್ಮಯಾನಂದ ಮಾತನಾಡಿ ನಮಗೆ ಚಿಕ್ಕ ಚಿಕ್ಕ ಕಾಯಿಲೆಗಳು ಬಂದಾಗಿ ವೃದ್ಯರ ಬಳಿ ಹೋಗಿ ಚಿಕಿತ್ಸೆಯನ್ನು ಪಡೆದು ಅವರು ನೀಡುವ ಔಷಧಿಯನ್ನು ಸೇವನೆ ಮಾಡುವ ಬದಲು ಮನೆಯಲ್ಲಿಯೇ ಇರುವ ಮನೆಮದ್ದನ್ನು ಬಳಕೆ ಮಾಡುವುದರ ಮೂಲಕ ನಮ್ಮ ಆರೋಗ್ಯವನ್ನು ನಾವೇ ಕಾಪಾಡಿಕೊಳ್ಳಬಹುದಾಗಿದೆ. ನಮಗೆ ರೋಗ ಬಂದಾಗ ಸಾಧ್ಯವಾದಷ್ಟು ಔಷಧಿಗಳ ಬಳಕೆಯನ್ನು ಮಾಡದೇ ಮನೆಯ ಮದ್ದನ್ನು ಬಳಕೆ ಮಾಡುವುದಕ್ಕೆ ಮುಂದಾಗಿ ಮನೆ ಮದ್ದಿಗೆ ನಮ್ಮ ಪುರಾತನ ಕಾಲದಿಂದಲೂ ಸಹಾ ಬೇಡಿಕೆ ಇದೆ ಎಂದರು.ಕಾರ್ಯಕ್ರಮದಲ್ಲಿ ಮರ್ಚೆಂಟ್ಸ್ ಬ್ಯಾಂಕ್‌ನ ನಿರ್ದೇಶಕರಾದ ರಘುರಾಮರೆಡ್ಡಿ, ಬಡಾವಣೆಯ ಗುತ್ತಿಗೆದಾರರಾದ ಕುಮಾರ್, ಮಂಜುನಾಥ್, ಹೇಮಂತಕುಮಾರ್, ರಾಮಪ್ಪ, ಕೇಧರನಾಥ್, ರಂಗಸ್ವಾಮಿ, ಚಂದ್ರಶೇಖರ್, ಮ್ಯಾಕಾನಿಕ್ ರಂಗಸ್ವಾಮಿ, ಅನಸೂಯರಂಗಸ್ವಾಮಿ, ಶೋಭಾ ದೇವರಾಜ್ ಮತ್ತು ಬಡಾವಣೆಯ ವಾಕರ್ ಗ್ರೂಪ್ ಸದಸ್ಯರು ಭಾಗವಹಿಸಿದ್ದರು.

# ಯೋಗ ಒಂದು ಧರ್ಮವಲ್ಲ ವಿಜ್ಞಾನ

» ಚಿತ್ರದುರ್ಗ

ಯೋಗ ಒಂದು ಧರ್ಮವಲ್ಲ. ಇದು ವಿಜ್ಞಾನ, ಯೋಗಕ್ಷೇಮದ ವಿಜ್ಞಾನ, ಯೌವನದ ವಿಜ್ಞಾನ, ದೇಹ, ಮನಸ್ಸು, ಆತ್ಮ ಮತ್ತು ಕ್ರಿಯೆಯನ್ನು ಸಂಯೋಜಿಸುವ ವಿಜ್ಞಾನ ಎಂದು ಯೋಗ ಗುರು ಗೋವಿಂದಪ್ಪ ತಿಳಿಸಿದ್ದಾರೆ.

ಚಿತ್ರದುರ್ಗ ನಗರದ ಜೋಗಿಮಟ್ಟಿ ರಸ್ತೆಯ ನೀಲಾದ್ರಿ ನೇಸರ ಕ್ಷೇಮಾಭಿವೃದ್ಧಿ ಸಂಘ (ರಿ.)ದವತಿಯಿಂದ ಹಮ್ಮಿಕೊಂಡಿದ್ದ 10ನೇ ಅಂತರಾಷ್ಟ್ರೀಯ ದಿನಾಚರಣೆಯ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು.

ಯೋಗ ಮಾಡುವುದರಿಂದ ಪ್ರತಿಯೊಬ್ಬರಿಗೂ ಆರೋಗ್ಯ ಸುಧಾರಿಸುತ್ತದೆ ಪ್ರತಿನಿತ್ಯ ಯೋಗ ಮಾಡುವುದರಿಂದ ನಮ್ಮ ಆರೋಗ್ಯ ಚೆನ್ನಾಗಿರುತ್ತದೆ. ಯೋಗ ನಮ್ಮ ಪುರಾತನವಾದ ವಿದ್ಯೆಯಾಗಿದೆ, ಇದನ್ನು ನಮ್ಮ ಹಿರಿಯರು ಮಾಡಿಕೊಂಡು ಬಂದಿದ್ದಾರೆ. ಇದನ್ನು ಈಗ ನಾವು ಮುಂದುವರೆಸಿಕೊಂಡು ಹೋಗಬೇಕಿದೆ, ಇದನ್ನು ನಮ್ಮ ಮಕ್ಕಳಿಗೆ ಕಲಿಸಬೇಕಿದೆ ಎಂದರು.

ಯೋಗವನ್ನು ಮಾಡುವುದರಿಂದ ನಮ್ಮ ಆರೋಗ್ಯವನ್ನು ನಾವು ಕಾಪಾಡಬಹುದಾಗಿದೆ, ಸಾಧ್ಯವಾದಷ್ಟು ಮಟ್ಟಿಗೆ ವೈದ್ಯರನ್ನು ದೂರ ಇಡಬಹುದಾಗಿದೆ. ಇದನ್ನು ಮಾಡಲು ವಯಸ್ಸಿನ ನಿಭಂಧನೆ ಇಲ್ಲ ಯಾರು ಬೇಕಾದರೂ ಸಹಾ ಮಾಡಬಹುದಾಗಿದೆ. ಯೋಗವನ್ನು ಮಾಡಲು ನಿಗಧಿತವಾದ ಸ್ಥಳದ ಅಗತ್ಯ ಇಲ್ಲ ಸ್ವಲ್ಪ ಜಾಗದಲ್ಲಿದಾರೂ ಸಹಾ ಮಾಡಬಹುದಾಗಿದೆ. ಎಂದು ತಿಳಿಸಿದರು.ಕಾರ್ಯಕ್ರಮದಲ್ಲಿ ನೀಲಾದ್ರಿ ನೇಸರ ಕ್ಷೇಮಾಭಿವೃದ್ಧಿ ಸಂಘದ ಪದಾಧಿಕಾರಿಗಳು ಭಾಗವಹಿಸುವುದರ ಮೂಲಕ ಯೋಗ ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು. ವಂದಪ್ಪ ಯೋಗವನ್ನು ತಿಳಿಸಿಕೊಟ್ಟರು.

ನೀಲಾದ್ರಿ ನೇಸರ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷರಾದ ವಿಜಯಕುಮಾರ್, ಮಹಿಳಾ ಘಟಕದ ಅಧ್ಯಕ್ಷರಾದ ನಳಿನಿ ಶ್ರೀನಿವಾಸ್, ನಿರ್ದೇಶಕರಾದ ಶ್ರೀನಿವಾಸ್, ಕಾರ್ಯದರ್ಶಿ ಅಭಿಲಾಷ್, ಯಶವಂತ ಸೇರಿದಂತೆ ಪದಾಧಿಕಾರಿಗಳು ಭಾಗವಹಿಸಿದ್ದರು.

# ಯೋಗ ಪ್ರತಿಯೊಬ್ಬರ ಆರೋಗ್ಯ ಕಾಪಾಡುತ್ತೆ: ರೇಣುಕಾ ಎಂ

» ಚಿತ್ರದುರ್ಗ

ಯೋಗ ಮಾಡುವುದರಿಂದ ಪ್ರತಿಯೊಬ್ಬರಿಗೂ ಆರೋಗ್ಯ ಸುಧಾರಿಸುತ್ತದೆ ಪ್ರತಿನಿತ್ಯ ಯೋಗ ಮಾಡುವುದರಿಂದ ನಮ್ಮ ಆರೋಗ್ಯ ಚೆನ್ನಾಗಿರುತ್ತೆ ಎಂದು ಚಿತ್ರದುರ್ಗ ನಗರಸಭಾ ಆಯುಕ್ತರಾದ ರೇಣುಕಾ ಎಂ ತಿಳಿಸಿದರು ನಗರದ ನಗರಸಭೆ ಕಛೇರಿಯ ಆವರಣದಲ್ಲಿ ಪ್ರಜಾಪಿತ ಬ್ರಹ್ಮಕುಮಾರಿ ಈಶ್ವರೀಯ ವಿಶ್ವ ವಿದ್ಯಾಲಯ ವತಿಯಿಂದ ನಗರಸಭೆಯ ಸಿಬ್ಬಂದಿಗಳಿಗೆ ಮತ್ತು ಪೌರಕಾರ್ಮಿಕರಿಗೆ ನಗರಸಭೆಯಿಂದ ಇದೆ ಮೊದಲ ಬಾರಿಗೆ ಆಯೋಜಿಸಿದ್ದೇವೆ ಎಂದು ಆಯುಕ್ತರು ತಿಳಿಸಿದರು ಯೋಗಾಸನದಲ್ಲಿ ವ್ಯವಸ್ಥಾಪಕರು, ಸಿಬ್ಬಂದಿಗಳು ಪೌರಕಾರ್ಮಿಕರು ಹಾಜರಿದ್ದರು

# ಸ್ವಯಂ, ಸಮಾಜಕ್ಕಾಗಿ ಯೋಗ

» ಚಿತ್ರದುರ್ಗ

ಯೋಗಒಂದುಧರ್ಮವಲ್ಲ.ಇದುವಿಜ್ಞಾನ,ಯೋಗಕ್ಷೇಮದ ವಿಜ್ಞಾನ, ಯೌವನದ ವಿಜ್ಞಾನ, ದೇಹ, ಮನಸ್ಸು, ಆತ್ಮ ಮತ್ತು ಕ್ರಿಯೆಯನ್ನು ಸಂಯೋಜಿಸುವ ವಿಜ್ಞಾನ ಎಂದು ಸಮೃದ್ಧಿ ಮಹಿಳಾ ಸಂಸ್ಥೆ ವತಿಯಿಂದ ಸಂದೇಶ ನೀಡಿದರು ನಗರದ ವಿದ್ಯಾನಗರದಲ್ಲಿರುವ ಬೋಟ್‌ಹೌಸ್‌ನಲ್ಲಿ ಸಮೃದ್ಧಿ ಮಹಿಳಾ ಸಂಸ್ಥೆವತಿಯಿಂದ 10ನೇ ಅಂತಾರಾಷ್ಟ್ರೀಯ ಯೋಗವನ್ನು ನೆರವೇರಿಸಲಾಯಿತು ಯೋಗದಲ್ಲಿ ಪಾಲ್ಗೊಂಡಿರುವವರು ಸುನೀತಾ ಮಲ್ಲಿಕಾರ್ಜುನ್, ರಮ್ಯಾ ರಾಜ್, ರೋಹಿಣಿ,ಶಶಿಕಲಾ ಪರಮೇಶ್, ಕವಿತಾ ಜೈನ್, ಯೋಗ ಟೀಚರ್ ವಿಜಯ ಕಾಲ ಹಾಗೂ ಜೈನ್ ಸಮುದಾಯದ ಮಕ್ಕಳು ಭಾಗವಹಿಸಿದ್ದರು.

## ಪ್ರಮುಖ ಸುದ್ದಿ

# ಮಲೇರಿಯಾ ರೋಗ ವ್ಯಾಪಿಸದಂತೆ ಜಾಗೃತಿವಹಿಸಲು ಗ್ರಾಮಸ್ಥರು ಆರೋಗ್ಯ ಇಲಾಖೆ ಸಲಹೆ ಸೂಚನೆ ಪಾಲಿಸಿ : ಡಾ.ಬಿಂದುಶ್ರೀ

» ಚಳ್ಳಕೆರೆ

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ತಾಲ್ಲೂಕು ಆರೋಗ್ಯ ಇಲಾಖೆ ಸಹಯೋಗದೊಂದಿಗೆ ಎಲ್ಲೂ ಸಹ ಮಲೇರಿಯಾ ರೋಗ ಹರಡದಂತೆ ಜಾಗ್ರತೆ ವಹಿಸುವ ದೃಷ್ಟಿಯಿಂದ ಮಲೇರಿಯಾ ವಿರೋಧಿ ಮಾಸಾಚಾರಣೆಯನ್ನು ಆಚರಿಸಲಾಗುತ್ತಿದ್ದು, ಸಾರ್ವಜನಿಕರು ಆರೋಗ್ಯ ಇಲಾಖೆಯ ಸಲಹೆ, ಸೂಚನೆಗಳನ್ನು ಪಾಲಿಸಬೇಕೆಂದು ಗೋಪನಹಳ್ಳಿ ಸರ್ಕಾರಿ ಪ್ರಾಥಮಿಕ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿ ಡಾ.ಬಿಂದುಶ್ರೀ ತಿಳಿಸಿದರು.

ಅವರು, ಗ್ರಾಮದ ಆಸ್ಪತ್ರೆ ಮುಂಭಾಗದಲ್ಲಿ ಆಸ್ಪತ್ರೆ ಸಿಬ್ಬಂದಿ ವರ್ಗ, ಆಶಾ, ಅಂಗನವಾಡಿ ಕಾರ್ಯಕರ್ತೆಯರು ಹಾಗೂ ಗ್ರಾಮಸ್ಥರೊಡನೆ ಮಲೇರಿಯಾ ವಿರೋಧಿ ಮಾಸಾಚಾರಣೆ ಜಾಗೃತಿ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು. ಗ್ರಾಮೀಣ ಭಾಗಗಳಲ್ಲಿ ಸ್ವಚ್ಚತೆ ಒಂದು ಸಾವಾಲಾಗಿದೆ, ಸ್ವಚ್ಚತೆಯನ್ನು ನಿರ್ಲಕ್ಷಿಸಿದರೆ ಯಾವುದೇ ಕ್ಷಣದಲ್ಲಾದರೂ ನಾವು ರೋಗಕ್ಕೆ ತುತ್ತಾಗುತ್ತೇವೆ. ಆದ್ದರಿಂದ ಸ್ವಚ್ಚತೆ ನಮ್ಮೆಲ್ಲರ ಮೊದಲ ಆದ್ಯತೆಯಾಗಬೇಕು ಎಂದರು. ತಾಲ್ಲೂಕು ಮಲೇರಿಯಾ ನೋಡಲ್ ಲ್ಯಾಬ್ ಅಧಿಕಾರಿ ಎಚ್.ತಿಪ್ಪೇಸ್ವಾಮಿ ಮಾತನಾಡಿ, ಮಲೇರಿಯಾರೋಗ ಹರಡಲು ಪ್ರಮುಖ ಕಾರಣ, ರಸ್ತೆ, ತಗ್ಗುಗುಂಡಿಗಳಲ್ಲಿ ನಿಂತ ಕೊಳಚೆ ನೀರು. ಎಲ್ಲಿ ನೀರು ಸಂಗ್ರಹವಾಗುತ್ತದೆಯೋ ಅದು ಸೊಳ್ಳೆಗಳ ವಾಸತಾಣವಾಗುತ್ತದೆ. ಸೊಳ್ಳೆಯಿಮದಲೇ ಮಲೇರಿಯಾ ಬಿರುಸಾಗಿ ಹರಡಲು ಸಾಧ್ಯ. ನಮ್ಮ ನಮ್ಮ ಸುತ್ತಮುತ್ತಲ ವಾತಾವರಣದ ಸ್ವಚ್ಚತೆ ಕಾಪಾಡಿದರೆ ಎಲ್ಲೂ ಸಹ ನೀರು ನಿಲ್ಲದಂತೆ ಜಾಗ್ರತೆ ವಹಿಸಿದರೆ ಮಲೇರಿಯಾ ನಮ್ಮತ್ತ ಸುಳಿಯುವುದಿಲ್ಲ. ಆರೋಗ್ಯ ಇಲಾಖೆ ನಿರಂತರವಾಗಿ ಮಲೇರಿಯಾವೂ ಸೇರಿದದಂತೆ ಹಲವಾರು ಮಾರಕ ರೋಗಗಳ ನಿಯಂತ್ರಣಕ್ಕೆ ಕ್ರಮ ಕೈಗೊಂಡಿದ್ದು, ಆ ಬಗ್ಗೆ ವೈದ್ಯರು ನೀಡಿದ ಸಲಹೆ, ಸೂಚನೆಯನ್ನು ಎಲ್ಲರೂ ತಪ್ಪದೆ ಪಾಲಿಸಬೇಕು ಎಂದರು.

ಆಸ್ಪತ್ರೆಸಿಬ್ಬಂದಿಯಾದತಿಪೇರುದ್ರಸ್ವಾಮಿ, ರಂಜಿತಾ, ಜಿ.ಟಿ.ಮಮತ, ಸಮುದಾಯ ಅಧಿಕಾರಿಗಳಾದ ಶಾವುಲ್‌ಹಮೀದ್, ಗ್ರಾಮದ ಮುಖಂಡರಾದ ಯಂಜಾರಪ್ಪ, ರಮ್ಮ, ಲಕ್ಷ್ಮಿದೇವಿ, ಆಶಾ ಕಾರ್ಯಕರ್ತೆಯರಾದ ವಸಂತಮ್ಮ, ಗೌರಮ್ಮ, ಶಾರದಮ್ಮ, ಲಕ್ಷ್ಮಿದೇವಿ ಮುಂತಾದವರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

## ಫಾಸ್ಟ್ ನ್ಯೂಸ್

### ನೀರಿನ ಮಿತಬಳಕೆ ಹಾಗೂ ಬಾಲ್ಯವಿವಾಹದ ಬಗ್ಗೆ ಬೀದಿನಾಟಕದ ಮೂಲಕ ಜಾಗೃತಿ

» ಚಳ್ಳಕೆರೆ

ಗ್ರಾಮೀಣ ಪ್ರದೇಶದಲ್ಲಿ ಮುಗ್ದ ಜನರೇ ಹೆಚ್ಚು ವಾಸಿಸುತ್ತಿದ್ದು, ಹಲವಾರು ವಿಚಾರಗಳಲ್ಲಿ ಅವರು ಮಾಹಿತಿ ಇಲ್ಲದೆ ಹಿನ್ನಡೆ ಅನುಭವಿಸುತ್ತಾರೆ. ಕೆಲವೊಮ್ಮೆ ಕಾನೂನಿನ ಬಗ್ಗೆ ಅರಿವಿಲ್ಲದೆ ಲೋಪಮಾಡುವುದು ಸಹಜ. ಅದೆ ರೀತಿ ನಮ್ಮೆಲ್ಲರ ಜೀವ ರಕ್ಷಣೆಗೆ ಅಗತ್ಯವಿರುವ ನೀರಿನ ಮಿತವ್ಯಯದ ಬಗ್ಗೆಯೂ ಸಹ ಜಾಗೃತಿಗೊಳ್ಳಬೇಕಿದೆ. ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಮತ್ತು ನಂದಗೋಕುಲ ಜ್ಞಾನವಿಕಾಸಕೇಂದ್ರ ಬೀದಿನಾಟಕದ ಮೂಲಕ ಜಾಗೃತಿ ಮೂಡಿಸುವ ಕಾರ್ಯ ಯಶಸ್ವಿಯಾಗಲಿ ಎಂದು ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಮುಖ್ಯ ಶಿಕ್ಷಕಿ ಚಾರುಮತಿ ತಿಳಿಸಿದರು. ಅವರು, ಶನಿವಾರ ಡಿ.ಉಪ್ಪಾರಹಟ್ಟಿಯ ಗ್ರಾಮದಲ್ಲಿ ನಡೆದ ಬೀದಿನಾಟಕ ಪ್ರದರ್ಶನವನ್ನು ಜ್ಯೊತಿ ಬೆಳಗುವ ಮೂಲಕ ಉದ್ಘಾಟಿಸಿ ಮಾತನಾಡಿದರು. ಕೆ.ಟಿ.ಮುತ್ತುರಾಜ್ ಮತ್ತು ಸಾಕ್ಷಿ ಕಲಾತಂಡ ನೀರಿನ ಸಂರಕ್ಷಣೆ, ಬಾಲ್ಯವಿವಾಹ, ಶಿಕ್ಷಣ ಕುರಿತಂತೆ ನಾಟಕದ ಮೂಲಕ ಜಾಗೃತಿ ಮೂಡಿಸಿದರು. ವಲಯ ಮೇಲ್ವಿಚಾರಕಿ ಲಕ್ಷ್ಮಿ, ಉಮೇಶ್, ಸಮನ್ವಯಾಧಿಕಾರಿ ಭವಾನಿಇಂದಿರಾ, ಲತಾ ಮುಂತಾದವರು ಉಪಸ್ಥಿತರಿದ್ದರು.

### ರಾಘವೇಂದ್ರಸ್ವಾಮಿ ಮಠದ ಕಾರ್ಯಕ್ರಮಗಳಿಗೆ ಭಕ್ತರ ಸಹಕಾರ ಅಭಿನಂದನಿಯ

» ಚಳ್ಳಕೆರೆ

ಕಳೆದ ಎರಡು ವರ್ಷಗಳಿಂದ ವಾಲ್ಮೀಕಿ ನಗರದ ನಂಜನಗೂಡು ಶ್ರೀರಾಘವೇಂದ್ರಸ್ವಾಮಿ ಮಠದಲ್ಲಿ ಶ್ರೀಸ್ವಾಮಿಯ ಪೂಜಾ ಕಾರ್ಯಗಳು ಹಾಗೂ ಸೇವೆಕಾರ್ಯಗಳಿಗೆ ಸಹಕಾರ ನೀಡುತ್ತಿರುವ ಮಠದ ಎಲ್ಲಾ ಕಾರ್ಯಕ್ರಮಗಳಿಗೆ ಭಕ್ತಿಯಿಂದ ಆರ್ಥಿಕ ನೆರವು ನೀಡಿ, ಸಹಕರಿಸುತ್ತಿರುವ ಎಲ್ಲರಿಗೂ ಧನ್ಯವಾದಗಳನ್ನು ಅರ್ಪಿಸುವುದಾಗಿ ಶ್ರೀಮಠದ ವಿಚಾರಕರ್ತರಾದ ಶ್ರೀನಾಥಭಟ್ ತಿಳಿಸಿದ್ದಾರೆ.

ಅವರು, ಭಾನುವಾರ ಶ್ರೀಮಠದಲ್ಲಿ ಹಮ್ಮಿಕೊಂಡಿದ್ದ ದ್ವಿತೀಯ ವಾರ್ಷಿಕೋತ್ಸವ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದರು. ಶ್ರೀಮಠದಲ್ಲಿಪ್ರತಿಗುರುವಾರವಿಶೇಷಪೂಜೆಯಲ್ಲದೆ, ಹುಣ್ಣಿಮೆಯಂದು ಶ್ರೀಸತ್ಯನಾರಾಯಣಸ್ವಾಮಿ ಪೂಜೆಯನ್ನೂ ಸಹ ನಡೆಸಲಾಗುತ್ತದೆ. ಕಳೆದ ಎರಡು ವರ್ಷಗಳಲ್ಲಿ ಶ್ರೀಮಠದಲ್ಲಿ ಹಲವಾರು ಅಭಿವೃದ್ಧಿ ಕಾರ್ಯಕ್ರಮಗಳು ಉತ್ತಮವಾಗಿ ನಡೆದಿವೆ. ವಿಶೇಷವಾಗಿ ಶ್ರೀಮಠದ ಬೃಂದಾವನಕ್ಕೆ ಭಕ್ತಾಧಿಗಳು ಬೆಳ್ಳಿಯ ರಕ್ಷಾಕವಚವನ್ನು ನೀಡಿದ್ದಾರೆ. ಅದೇ ರೀತಿ ಶ್ರೀಆಂಜನೇಯಸ್ವಾಮಿಯ ಮೂರ್ತಿಗೂ ಬೆಳ್ಳಿ ರಕ್ಷಾ ಕವಚ ನೀಡಿದ್ದಾರೆ. ಮಠದ ಆವರಣದಲ್ಲಿ ಪ್ರತಿಗುರುವಾರ ಶ್ರೀರಾಯರ ರಥದ ಮೆರವಣಿಗೆ ನಡೆಯುತ್ತಿದ್ದು, ಶ್ರೀರಥಕ್ಕೂ ಸಹ ಬೆಳ್ಳಿ ಕವಚವನ್ನು ಸಿದ್ದಪಡಿಸುವ ಕಾರ್ಯ ಪ್ರಗತಿಯಲ್ಲಿದೆ. ಈಗಾಗಲೇ ಹಲವಾರು ದಾನಿಗಳು ಬೆಳ್ಳಿಕವಚ ನಿರ್ಮಾಣಕ್ಕಾಗಿ ಬೆಳ್ಳಿ ಹಾಗೂ ಹಣವನ್ನು ನೀಡಿದ್ದಾರೆ. ಇನ್ನೂ ಕೆಲವೇ ದಿನಗಳಲ್ಲಿ ಈ ಕಾರ್ಯವೂ ಸಹ ಮುಕ್ತಾಯವಾಗಲಿದೆ ಎಂದರು. ಶ್ರೀಮಠದ ವ್ಯವಸ್ಥಾಪಕ ಶ್ರೀನಾಥಚಾರ್ ಮಾಹಿತಿ ನೀಡಿ, ಬೆಳಗ್ಗೆ 10ಕ್ಕೆ ಮಠದ ಒಳ ಆವರಣದಲ್ಲಿ ರಥೋತ್ಸವವನ್ನು ನೂರಾರು ಭಕ್ತರ ಸಮ್ಮುಖದಲ್ಲಿ ನಡೆಸಲಾಯಿತು. ನಂತರ ನಗರದ ಗಾಯಿತ್ರಿ ವಿಪ್ರಮಹಿಳಾ ಮಂಡಳಿ ಭಜನಾತಂಡ ಸುಮಾರು ಎರಡು ಗಂಟೆಗಳ ಕಾಲ ಭಜನಾ ಕಾರ್ಯಕ್ರಮ ನಡೆಸಿಕೊಟ್ಟರು. ನಂತರ ಮಂತ್ರಪುಷ್ಪದೊಂದಿಗೆ ಮಹಾಮಂಗಳಾರತಿ ಹಾಗೂ ತೀರ್ಥಪ್ರಸಾದ ವಿನಿಯೋಗ ಮಾಡಲಾಯಿತು. ಶ್ರೀಮಠದ ವಿಚಾರಣಾಕರ್ತರಾದ ಗುರುನಾಥಭಟ್, ಕಿಶೋರ್‌ಶೆಟ್ಟಿ, ಅಮರನಾಥಗುಪ್ತ, ಎಂ.ಪಿ.ಗುರುರಾಜ್, ಎಂ.ಸತ್ಯನಾರಾಯಣರಾವ್, ಜಿ.ಕೃಷ್ಣಮೂರ್ತಿ,ಅಮರನಾಥ.ಪೂರೋಹಿತರಾದ ಆನಂದಚಾರ್, ರಾಘವೇಂದ್ರಚಾರ್ ಮುಂತಾದವರು ಪೂಜಾ ಕಾರ್ಯಕ್ರಮದಲ್ಲಿ

## ಫಾಸ್ಟ್ ನ್ಯೂಸ್

### ಪ್ರಥಮ ವರ್ಷದ ಡಿಪ್ಲೋಮಾ: ಪ್ರವೇಶ ಅವಧಿ ವಿಸ್ತರಣೆ

» ಚಿತ್ರದುರ್ಗ

2024–25ನೇ ಶೈಕ್ಷಣಿಕ ಸಾಲಿನಲ್ಲಿ ಹಿರಿಯೂರು ಸರ್ಕಾರಿ ಪಾಲಿಟೆಕ್ನಿಕ್ ಸಂಸ್ಥೆಯಲ್ಲಿ ಆನ್‌ಲೈನ್ ಮೂಲಕ ಸೀಟು ಹಂಚಿಕೆಯಾದ ನಂತರ ಭರ್ತಿಯಾಗದೇ ಉಳಿದಿರುವ ಸೀಟುಗಳನ್ನು ಪ್ರಾಂಶುಪಾಲರ ಹಂತದಲ್ಲಿ ಆಫ್‌ಲೈನ್ ಮೂಲಕ ಪ್ರಥಮ ವರ್ಷದ ಡಿಪ್ಲೋಮಾ ಸೀಟುಗಳಿಗೆ ಅರ್ಹ ಅಭ್ಯರ್ಥಿಗಳು ಸಂಸ್ಥೆಗೆ ಹಾಜರಾಗಿ ಪ್ರವೇಶ ಪಡೆಯಲು ಪ್ರವೇಶಾವಧಿಯನ್ನು ಜೂನ್ 29 ರವರೆಗೆ ವಿಸ್ತರಿಸಲಾಗಿದೆ. ಅಭ್ಯರ್ಥಿಗಳು ಮೂಲ ಎಸ್.ಎಸ್.ಎಲ್.ಸಿ ಅಂಕಪಟ್ಟಿ, ಮೂಲ ವರ್ಗಾವಣೆ ಪತ್ರ, ಜಾತಿ ಮತ್ತು ಆದಾಯ ಪ್ರಮಾಣ ಪತ್ರ, ಕನ್ನಡ ಮಾಧ್ಯಮ, ಗ್ರಾಮೀಣ ಮಾಧ್ಯಮ ಹಾಗೂ ವ್ಯಾಸಂಗ ಪ್ರಮಾಣ ಪತ್ರದೊಂದಿಗೆ ಅರ್ಜಿ ಸಲ್ಲಿಸಿ ಪ್ರವೇಶ ಪಡೆಯಲು ಜೂನ್ 29ರವರೆಗೆ ಅವಧಿಯನ್ನು ವಿಸ್ತರಿಸಲಾಗಿದೆ ಹೆಚ್ಚಿನ ಮಾಹಿತಿಗಾಗಿ ಸಂಸ್ಥೆ ಕಚೇರಿಯ ಪ್ರವೇಶ ವಿಭಾಗದ ದೂರವಾಣಿ ಸಂಖ್ಯೆ 9900337587, 9482787542 ಗೆ ಸಂಪರ್ಕಿಸಬಹುದು.

### ಮಹಿಳಾ ನಿಗಮದ ಅಧ್ಯಕ್ಷರ ಜಿಲ್ಲಾ ಪ್ರವಾಸ

» ಚಿತ್ರದುರ್ಗ

ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಜಿ.ಪದ್ಮಾವತಿ ಅವರು ಇದೇ ಜೂನ್ 24ರಂದು ಚಿತ್ರದುರ್ಗ ಜಿಲ್ಲಾ ಪ್ರವಾಸ ಕಾರ್ಯಕ್ರಮ ಹಮ್ಮಿಕೊಂಡಿದ್ದಾರೆ. ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಜಿ.ಪದ್ಮಾವತಿ ಅವರು ಜೂನ್ 24ರಂದು ಬೆಳಿಗ್ಗೆ 7ಕ್ಕೆ ಬೆಂಗಳೂರಿನಿಂದ ಹೊರಟು, ಬೆಳಿಗ್ಗೆ 10ಕ್ಕೆ ಚಿತ್ರದುರ್ಗಕ್ಕೆ ಆಗಮಿಸುವರು. ಬೆಳಿಗ್ಗೆ 10.30ಕ್ಕೆ ಚಿತ್ರದುರ್ಗ ತಾಲ್ಲೂಕಿನ ಭರಮಸಾಗರದ ಕೊಳಹಾಳ್‌ನ ಮಡಿಲು ಸ್ವಾವಲಂಭಿ ಸಂಸ್ಥೆಯವರ "ಕುರಿ ಸಾಕಾಣಿಕೆ ಕೇಂದ್ರ" ಘಟಕ ಉದ್ಘಾಟನಾ ಕಾರ್ಯಕ್ರಮ ನೆರವೇರಿಸುವರು. ಬೆಳಿಗ್ಗೆ 11.30ಕ್ಕೆ ನಿಗಮದ ಅಧಿಕಾರಿಗಳು ಮತ್ತು ಮಹಿಳೆಯರೊಂದಿಗೆ ಸಭೆ ನಡೆಸುವರು. ಮಧ್ಯಾಹ್ನ 2.30ಕ್ಕೆ ಜಿಲ್ಲೆಯ ವಿವಿಧ ಘಟಕಗಳ ವೀಕ್ಷಣೆ ಮಾಡಿ ನಂತರ ಸಂಜೆ 4.30ಕ್ಕೆ ಕೇಂದ್ರಸ್ಥಾನ ಬೆಂಗಳೂರಿಗೆ ಪ್ರಯಾಣ ಬೆಳೆಸುವರು.

# ಶುದ್ಧ ಆಹಾರ ಸೇವನೆ ರೂಢಿಸಿಕೊಳ್ಳಿ: ಸ್ವಾಮೀಜಿ

» ದಾವಣಗೆರೆ

ಸಾತ್ವಿಕ ಶುದ್ಧ ಆಹಾರ ಪದಾರ್ಥಗಳ ಸೇವನೆಯಿಂದ ದೇಹದ ಆರೋಗ್ಯದ ಜೊತೆ ಮಾನಸಿಕ ಆರೋಗ್ಯ ಪಡೆಯಲು ಸಾಧ್ಯ ಎಂದು ಕಣ್ವಕುಪ್ಪಿ ಗವಿಮಠದ ಡಾ.ಶಾಂತಲಿಂಗ ಶಿವಾಚಾರ್ಯ ಶ್ರೀಗಳು ಹೇಳಿದರು.

ದಾವಣಗೆರೆಯ ಸುಶ್ರುತ ಆಯುರ್ವೇದ ಕಾಲೇಜು ಮತ್ತು ಆಸ್ಪತ್ರೆ ಆವರಣದಲ್ಲಿ ಮಾನವ ವಿಕಾಸ ಫೌಂಡೇಶನ್,ಭಾರತ ವಿಕಾಸ ಪರಿಷತ್ ಗೌತಮ ಶಾಖೆ ದಾವಣಗೆರೆ ಇವರ ಸಹಯೋಗದೊಂದಿಗೆ ನಡೆದ ಅಂತರಾಷ್ಟ್ರೀಯ ಯೋಗ ದಿನಾಚರಣೆಯ ದಶಮಾನೋತ್ಸವ ಕಾರ್ಯಕ್ರಮದ ಸಾನಿಧ್ಯ ವಹಿಸಿ ಆಶೀರ್ವಚನ ನೀಡಿದರು.

ನಾಲಿಗೆಯ ಕ್ಷಣಿಕ ರುಚಿಯ ಆಸೆಗಾಗಿ ನಾವು ದೇಹಕ್ಕೆ ಬೇಡವಾದ ಆಹಾರ ಪದಾರ್ಥಗಳನ್ನು ಸೇವಿಸುವುದರ ಮೂಲಕ ನಮ್ಮ ಆರೋಗ್ಯವನ್ನು ನಾವೇ ಹಾಳು ಮಾಡಿಕೊಳ್ಳುತ್ತಿದ್ದೇವೆ ಇದರಿಂದ ದೈಹಿಕವಾಗಿ ಹಾಗೂ ಮಾನಸಿಕವಾಗಿ ನಾವು ಕುಗ್ಗುತ್ತಿದ್ದೇವೆ ಎಂದು ಹೇಳಿದರು.

ಹಿಂದೆ ಹಣ, ವಿದ್ಯೆ ವಸತಿ ಸಂಪರ್ಕ ಆಹಾರ ಧಾನ್ಯಗಳ ಕೊರತೆ ಇದ್ದಾಗಲೂ ಸಹ ಶಾಂತಿ ನೆಮ್ಮದಿಯಿಂದ ಜೀವನ ಸಾಗಿಸುತ್ತಿದ್ದರು ಆದರೆ ಇಂದು ವಸತಿ ಸ್ಥಾನಮಾನ ಹಣ ಯಾವುದೇ ಕೊರತೆ ಇಲ್ಲದಿದ್ದರೂ ನೆಮ್ಮದಿ ಹಾಗೂ ಆರೋಗ್ಯವೇ ಇಲ್ಲದಂತ ಜೀವನ ಸಾಗಿಸುವಂಥಾಗಿದೆ ಎಂದು ಕಳವಳ ವ್ಯಕ್ತಪಡಿಸಿದರು.ಪ್ರತಿನಿತ್ಯ ಒಂದು ಗಂಟೆ ಯೋಗ ಧ್ಯಾನ ಮತ್ತು ಪ್ರಾಣಾಯಾಮಗಳಿಗೆ ಮೀಸಲಿಟ್ಟಾಗ ದೇಹದ ಅಂಗಾಂಗಗಳ ಶಕ್ತಿಯುತವಾಗುವುದರ ಜೊತೆಗೆ ಮಾನಸಿಕ ಏಕಾಗ್ರತೆ ಸಾಧ್ಯವಾಗುತ್ತದೆ ಎಂದರು. ನಾವು ತಂತ್ರಜ್ಞಾನದಲ್ಲಿ ಎಷ್ಟೇ ಮುಂದುವರೆಯದಿದ್ದರೂ ನಮ್ಮ ಪ್ರಾಚೀನ ಪದ್ಧತಿಯಂತೆ ಜೀವನ ನಡೆಸುವುದು ಅವಶ್ಯಕವಾಗಿದೆ ಎಂದು ಹೇಳುವ ಮೂಲಕ ಎಲ್ಲರಿಗೂ ಅಂತರಾಷ್ಟ್ರೀಯ ಯೋಗ ದಿನಾಚರಣೆಯ ಶುಭ ಕೋರಿದರು.

ಸಂಸ್ಥೆಯ ಅಧ್ಯಕ್ಷರಾದ ಶ್ರೀ ಬಸವಶತಪ್ಪನವರು ಮತ್ತು ಸಂಸ್ಥೆಯ ಕಾರ್ಯದ್ರಶಿಗಳಾದ ಡಾ. ಸತೀಶ್ ಬಿ. ಜಿ ಉಪಸ್ಥಿತರಿದ್ದು

ಸಭಾ ಕಾರ್ಯಕ್ರಮ ಮೊದಲು ಕಾಲೇಜು ಅಧ್ಯಾಪಕರಾದ ಡಾ.ಸೌಮ್ಯ ಯೋಗ ಮತ್ತು ಪ್ರಾಣಾಯಾಮ ಕುರಿತು ವಿಶ್ಲೇಷಣೆ ಸಹಿತ ಮಾಡಿಸಲಾಯಿತು. ಕಾರ್ಯಕ್ರಮದ ನಿರೂಪಣೆಯನ್ನು ಡಾ. ಚಿನ್ಮಯಿ ಹಾಗೂ ಡಾ.ಸಹನಾ ಅವರು ಮಾಡಿದರು, ಪ್ರಾರ್ಥನೆಯನ್ನು ಕೃತಿಕಾ ಎಸ್ ಮತ್ತು ಸಂಗಡಿಗರು ಮಾಡಿದರು, ಸ್ವಾಗತವನ್ನು ಸಂಸ್ಥೆಯ ಪ್ರಾಂಶುಪಾಲರಾದ ಡಾ.ಅಕ್ಬರ್ ಖಾನ್ ಮಾಡಿದರು, ಕಾರ್ಯಕ್ರಮವನ್ನು ಡಾ.ಸೌಮ್ಯ ವಂದನಾರ್ಪಣೆಯೊಂದಿಗೆ ಮುಕ್ತಾಯಗೊಳಿಸಿದರು

## ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ಅನುಷ್ಠಾನ ಮತ್ತು ಸಾಪಲ್ಯತೆಗೆ ಬೀದಿನಾಟಕ ಸಹಕಾರಿ: ಅಪ್ಪಣ್ಣ

» ಚಳ್ಳಕೆರೆ

ತಾಲ್ಲೂಕಿನ ನಾಯಕನಹಟ್ಟಿ ಹೋಬಳಿಯ ಶ್ರೀಕ್ಷೇತ್ರ ಧರ್ಮಸ್ಥಳ ಯೋಜನಾಧಿಕಾರಿ ಅಣ್ಣಪ್ಪ ಹೊಸಹಳ್ಳಿ ಗ್ರಾಮದಲ್ಲಿ ಆಯೋಜಿಸಿದ್ದ ಸಾಮಾಜಿಕ ಸಮಸ್ಯೆ, ಯೋಜನೆಗಳ ಸದುಪಯೋಗ, ವಿದ್ಯಾರ್ಥಿಗಳ ಜ್ಞಾನವಿಕಾಸ ಸಂಬಂಧಪಟ್ಟಂತೆ ಬೀದಿನಾಟಕದ ಮೂಲಕ ಜಾಗೃತಿ ಮೂಡಿಸುತ್ತಿದ್ದು, ಇದರ ಸದುಪಯೋಗ ಪಡೆದುಕೊಳ್ಳುವಂತೆ ಮನವಿ ಮಾಡಿದರು.

ಕಳೆದ ಹಲವಾರು ದಶಕಗಳಿಂದ ಈ ಯೋಜನೆಯಡಿ ಹಲವಾರು ಕಾರ್ಯಕ್ರಮ ರೂಪಿಸಲಾಗುತ್ತಿದೆ. ಮೊದಲ ಹಂತವಾಗಿ ಸ್ತ್ರಿಶಕ್ತಿ ಸ್ವಸಹಾಯ ಗುಂಪುಗಳಿಗೆ ಆರ್ಥಿಕ ಶಕ್ತಿ ತುಂಬುವ ಮೂಲಕ ನಮ್ಮ ಯೋಜನೆ ಆರಂಭಗೊಂಡು ಒಂದು ಹೈನುವಾರಿಕೆ, ದೇವಸ್ಥಾನ ಜೀರ್ಣೋದ್ಧಾರ,ಪಶುಸಂಗೋಪನೆ, ಶಾಲಾಕಟ್ಟಡಗಳ ನಿರ್ಮಾಣ, ಮಾತೃಯೋಜನೆ ಮುಂತಾದ ಕಾರ್ಯಕ್ರಮಗಳಿಗೆ ಆರ್ಥಿಕ ನೆರವು ನೀಡುತ್ತಿದೆ. ಇಂತಹ ಯೋಜನೆಗಳ ಮೂಲಕ ಸಾವಿರಾರು ಕುಟುಂಬಗಳು ಆರ್ಥಿಕ ಬಲವರ್ಧನೆಗೆ ಸಹಕಾರ ನೀಡಲಾಗುತ್ತಿದೆ ಎಂದರು.

ಗ್ರಾಮ ಪಂಚಾಯಿತಿ ಸದಸ್ಯರಾದ ಬಸವರಾಜು, ರಾಮಣ್ಣ, ಒಕ್ಕೂಟದ ಅಧ್ಯಕ್ಷ ಶಿವಣ್ಣ, ಮೇಲ್ವಿಚಾರ ಬಸವರಾಜು, ಜ್ಞಾನವಿಕಾಸ ಸಮನ್ವಾಧಿಕಾರಿ ಯಶೋಧ, ಸೇವಾಪ್ರತಿನಿಧಿ ಜ್ಯೋತಿ ಭಾಗವಹಿಸಿದ್ದರು.

## ಧಾರ್ಮಿಕ ಕಾರ್ಯಕ್ರಮಗಳಿಂದ ಗುಣಾತ್ಮಕ ಬದುಕು ಸಾಧ್ಯ: ಮಾತಾಜಿತ್ಯಾಗಮಯಿ

» ಚಳ್ಳಕೆರೆ

ಕಳೆದ ನೂರಾರು ವರ್ಷಗಳಿಂದ ಸಮಾಜದ ಪ್ರತಿಯೊಂದು ಸಮುದಾಯವೂ ನೆಮ್ಮದಿ ಸಂತೋಷದಿಂದ ಬದುಕುತ್ತಿದೆ. ಪ್ರತಿಯೊಬ್ಬರೂ ತಮ್ಮದೇಯಾದ ವಿಚಾರಧಾರೆಗಳನ್ನು ಹೊಂದಿದ್ದಾರೆ. ಆದರೆ, ನಮ್ಮೆಲ್ಲರ ವಿಚಾರ ಧಾರೆಗಳು ದೈವಸಂಕಲ್ಪದಿಂದ ಕೂಡಿರಬೇಕಾಗಿದೆ. ನಾವು ನಂಬಿದ ಧರ್ಮ, ತತ್ವ, ಸಿದ್ಧಾಂತ ಮಾತ್ರ ನಮ್ಮ ಬದುಕನ್ನು ಅರ್ಥಪೂರ್ಣಗೊಳಿಸುತ್ತದೆ ಎಂದು ಶಾರದಾಶ್ರಮದ ಮಾತಾಜಿತ್ಯಾಗಮಯಿ ತಿಳಿಸಿದರು.

ಅವರು, ನನ್ನಿವಾಳ ಗ್ರಾಮ ಪಂಚಾಯಿತಿ ವ್ಯಾಪ್ತಿಯ ದೇವರಹಟ್ಟಿ ಗ್ರಾಮದಲ್ಲಿ ಶಾರದಾಶ್ರಮ ಸಹಯೋಗದಲ್ಲಿ ಹಮ್ಮಿಕೊಂಡಿದ್ದ ಸತ್ಸಂಗ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು. ಭಗವಂತನ ಕೃಪೆಯಿಂದ ಈ ವರ್ಷ ಎಲ್ಲೆಡೆ ಉತ್ತಮ ಮಳೆಯಾಗಿದೆ. ರೈತರು ಮತ್ತು ಕಾರ್ಮಿಕರ ಮುಖದಲ್ಲಿ ಸಂತಸ ಮನೆ ಮಾಡಿದೆ, ಈ ಭಾಗದಲ್ಲಿ ಉತ್ತಮ ವರುಣನ ಕೃಪೆಯಾಗಲು ಭಗವಂತನೇ ಕಾರಣಕರ್ತ. ನಾವೆಲ್ಲರೂ ವಿಚಾರವಾದಿಗಳಾಗಬೇಕು, ಜ್ಞಾನ ನಮ್ಮೆಲ್ಲರ ಸಂಪತ್ತಾಗಬೇಕು, ಸತ್ಸಂಗದ ಮೂಲಕ ಉತ್ತಮ ಬದುಕು ಕಟ್ಟಿಕೊಳ್ಳುವ ಸಂಕಲ್ಪ ಮಾಡೋಣವೆಂದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T